> ನಾವು ಇಂದು ದೇವಾಲಯಕ್ಕೆ ಭೇಟಿ ನೀಡಲು ಸಮಯ ನೀಡುತ್ತಿಲ್ಲ. ದೇವಾಲಯ ಎಂದರೆ ಸಮುದ್ರವಿದ್ದಂತೆ ಮನೆ ಎಂದರೆ ಬಾವಿ ಇದ್ದಂತೆ. ದೇವಾಲಯದಲ್ಲಿ ಹೋಮ, ಹವನಾದಿ, ಅಭಿಷೇಕಗಳು ನಡೆಯುವುದರಿಂದ ದೇವರ ಸಾನಿಧ್ಯ, ಶಕ್ತಿ ಸಂಚಯ ಹೆಚ್ಚಿರುತ್ತದೆ.
> • **ಮಾಧವಾನಂದ ಭಾರತೀ ಶ್ರೀ** ಶ್ರೀ ಮನ್ನೆಲೆಮಾವಿನಮಠ

ಸುದ್ದಿ ಸಿಂಚನ

ನಾಳೆ ಶ್ರೀಧರ ಹೆಗಡೆಗೆ ಗೌರವ ಸನ್ಮಾನ

ಸಿದ್ದಾಪುರ: ಐವತ್ತು ವರ್ಷಗಳಿಂದ ಯಕ್ಷಗಾನರಂಗದಲ್ಲಿ ಸೇವೆ ಸಲ್ಲಿಸುತ್ತಿರುವ ಬಡಗುತಿಟ್ಟಿನ ಖ್ಯಾತ ಯಕ್ಷಗಾನ ಹಾಸ್ಯಕಲಾವಿದ ಶ್ರೀಧರ ಹೆಗಡೆ ಚಪ್ಪರಮನೆ ಅವರಿಗೆ ದೊಡ್ಮನೆಯಲ್ಲಿ ಮೇ 9ರಂದು ಸಂಜೆ 8.30ಕ್ಕೆ ಗೌರವ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ದೊಡ್ಮನೆ ಯಕ್ಷೋತ್ಸವ ಸಂಘಟಕರಾದ ದರ್ಶನ ಹೆಗಡೆ ಹಾಗೂ ಗೌರೀಶ ಹೆಗಡೆ ಹೇಳಿದರು. ಪಟ್ಟಣದ ಶಂಕರಮಠದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀಧರ ಹೆಗಡೆಯವರು ಚಿಕ್ಕವಯಸ್ಸಿನಿಂದಲೇ ಯಕ್ಷಗಾನರಂಗದಲ್ಲಿ ತಮ್ಮನ್ನು ಗುರುತಿಸಿಕೊಂಡು ಅನೇಕ ಹಿರಿಯ ಹಾಗೂ ಕಿರಿಯ ಕಲಾವಿರೊಂದಿಗೆ ಪಾತ್ರ ನಿರ್ವಹಿಸಿ ಮೆಚ್ಚುಗೆ ಗಳಿಸಿದ್ದಾರೆ. ಇಂತಹ ಅಪರೂಪದ ಕಲಾವಿದರನ್ನು ಗುರುತಿಸಿ ಗೌರವಿಸಲಾಗು ತ್ತಿದೆ. ಸಿದ್ದಾಪುರ ಶಿಕ್ಷಣ ಪ್ರಸಾರಕ ಸಮಿತಿ ಅಧ್ಯಕ್ಷ ಶಶಿಭೂಷಣ ಹೆಗಡೆ ದೊಡ್ಮನೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಉದ್ಯಮಿ ಅನಂತಮೂರ್ತಿ ಹೆಗಡೆ ಶಿರಸಿ ಕಾರ್ಯಕ್ರಮ ಉದ್ಘಾಟಿಸುವರು. ಟಿಎಂಎಸ್ ಅಧ್ಯಕ್ಷ ಆರ್.ಎಂ. ಹೆಗಡೆ ಬಾಳೇಸರ, ಯಕ್ಷಗಾನ ಅಕಾಡೆಮಿ ಸದಸ್ಯ ಹಾಗೂ ಯಕ್ಷಗಾನ ಕಲಾವಿದ ವಿದ್ಯಾಧರ ರಾವ್ ಜಲವಳ್ಳಿ, ಹಿರಿಯ ಪತ್ರಕರ್ತ ನಾಗರಾಜ ಭಟ್ಟ ಕೆಕ್ಕಾರ, ಹವ್ಯಾಸಿ ಯಕ್ಷಗಾನ ಕಲಾವಿದ ಶ್ರೀಧರ ಭಟ್ಟ ಗಡಿಹಿತ್ಲು ಉಪಸ್ಥಿತರಿರುವರು. ನಂತರ ಪೆರ್ಡೂರು ಮೇಳ ಹಾಗೂ ಅತಿಥಿ ಕಲಾವಿದರಿಂದ ರುದ್ರಕೋಪ, ಮಾಗಧ ಹಾಗೂ ಭದ್ರಸೇನ ಯಕ್ಷಗಾನ ಪ್ರದರ್ಶನಗೊಳ್ಳಲಿದೆ. ಅತಿಥಿ ಕಲಾವಿದರಾಗಿ ಶ್ರೀಧರ ಹೆಗಡೆ ಚಪ್ಪರಮನೆ ಹಾಗೂ ವಿದ್ಯಾಧರ ಜಲವಳ್ಳಿ ಪಾಲ್ಗೊಳ್ಳಲಿದ್ದಾರೆ ಎಂದರು.


ಶ್ರೀಧರ ಹೆಗಡೆ ಚಪ್ಪರಮನೆ

ಮುಂಡಗೋಡ ಸರ್ಕಾರಿ ಪಪೂ ಕಾಲೇಜಿನಲ್ಲಿ ಪ್ರವೇಶ ಪ್ರಾರಂಭ

ಮುಂಡಗೋಡ: ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 2026-27ನೇ ಸಾಲಿನ ಪಿಯುಸಿ ಪ್ರಥಮ ವರ್ಷಕ್ಕೆ ಪ್ರವೇಶಗಳು ಆರಂಭವಾಗಿವೆ. ಅನುಭವಿ ಉಪನ್ಯಾಸಕರಿಂದ ಭೋಧನೆ, ವಿಜ್ಞಾನ ವಿಭಾಗದಲ್ಲಿ ಉಚಿತವಾಗಿ ಸಿಇಟಿ, ನೀಟ್ ತರಬೇತಿ ನೀಡಲಾಗುವುದು ಸುಸಜ್ಜಿತ ಗ್ರಂಥಾಲಯ ಸೌಲಭ್ಯವಿದ್ದು, ಕ್ರೀಡೆ, ಸಹಪಠಯೇತರ ಚಟುವಟಿಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಆದ್ಯತೆ ನೀಡಲಾಗುವುದು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ತರಗತಿಗಳ ಮೂಲಕ ತರಬೇತಿ ಹಾಗೂ ಸರಣಿ ಪರೀಕ್ಷೆಗಳನ್ನು ನಡೆಸಲಾಗುವುದೆಂದು ಕಾಲೇಜಿನ ಪ್ರಾಂಶುಪಾಲ ಗುಡ್ಡಪ್ಪ ಕಡೆಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೇರೆಯವರಿಗೆ ಒಳಿತು ಬಯಸಿ

ಚೆನ್ನಕೇಶವ ದೇವರ ನೂತನ ಮಹಾದ್ವಾರ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾಧವಾನಂದ ಭಾರತೀ ಶ್ರೀ


ಕಾನಗೋಡ ಶ್ರೀ ಚೆನ್ನಕೇಶವ ದೇವರ ನೂತನ ಮಹಾದ್ವಾರ ಲೋಕಾರ್ಪಣೆ ಕಾರ್ಯಕ್ರಮವನ್ನು ಮಾಧವಾನಂದ ಭಾರತೀ ಮಹಾಸ್ವಾಮಿಗಳು ನೆರವೇರಿಸಿದರು.

- ದೇವರಲ್ಲಿ ಆಸ್ತಿ, ಅಂತಸ್ತು ಕೇಳುವ ಬದಲು ಆರೋಗ್ಯ ಭಾಗ್ಯ ನೀಡು ಎಂದು ಬೇಡಬೇಕು.
- ಕಷ್ಟಬಂದಾಗ ಮಾತ್ರ ದೇವರ ನನೆಯುವುದಲ್ಲ.
- ಕಷ್ಟ ಪರಿಹರಿಸು ಎಂದು ಹರಕೆ ತಿರಸುವುದು ದೇವರಿಗೆ ಲಂಚ ನೀಡಿದಂತೆ.

• **ಕನ್ನಡಪ್ರಭ ವಾರ್ತೆ** ಹೊನ್ನಾವರ

ತಾಲೂಕಿನ ಕಾನಗೋಡ ಶ್ರೀ ಚೆನ್ನಕೇಶವ ದೇವರ ನೂತನ ಮಹಾದ್ವಾರ ಲೋಕಾರ್ಪಣೆ ಕಾರ್ಯಕ್ರಮ ಸಿದ್ದಾಪುರದಶ್ರೀಮನ್ನೆಲೆಮಾವಿನಮಠದಮಾಧವಾನಂದ ಭಾರತೀ ಮಹಾಸ್ವಾಮಿಗಳಿಂದ ಬುಧವಾರ ನಡೆಯಿತು.

ನಂತರ ದೇವಾಲಯದ ಆವಾರದಲ್ಲಿ ನಡೆದ ಸಭಾ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ಈ ಮಹಾದ್ವಾರ ದೇವಾಲಯಕ್ಕೆ ದ್ವಾರ ಮಾತ್ರವಲ್ಲ, ಮನುಷ್ಯನ ಜೀವನದ ಉನ್ನತಿಗೆ, ಶ್ರದ್ಧಾಭಕ್ತಿಗೂ ಕಾರಣವಾಗುತ್ತದೆ. ಈ ಮಹಾದ್ವಾರ ದರ್ಶನ ಮಾಡಿದರೆ ಪಾಪಕ್ಷಯವಾಗುತ್ತದೆ ಎಂದು ಶಾಸ್ತ್ರಗಳು ಹೇಳುತ್ತವೆ. ಮಹಾದ್ವಾರ ಎನ್ನುವುದು ದೇವರ ಪಾದ, ಅದು ಎಲ್ಲಿಂದ ಪ್ರಾರಂಭವಾಗುತ್ತದೆಯೋ ಅಲ್ಲಿಂದ ದೇವರು ಮಲಗಿದ್ದಾನೆ ಎನ್ನುವುದು ಶಾಸ್ತ್ರದಲ್ಲಿದೆ. ದ್ವಾರದ ಒಳಗೆ ಪ್ರವೇಶಿಸಿದಾಗ ಸತ್ ಚಿಂತನೆ, ಸದಾಚಾರದ ಚಿಂತನೆ, ಬೇರೆಯವರಿಗೆ ಒಳಿತು ಬಯಸಬೇಕು. ದೇವರಲ್ಲಿ ಆಸ್ತಿ, ಅಂತಸ್ತು ಕೇಳುವ ಬದಲು ಆರೋಗ್ಯ ಭಾಗ್ಯ ನೀಡು ಎಂದು ಬೇಡಬೇಕು. ಕಷ್ಟಬಂದಾಗ ಮಾತ್ರ ದೇವರ ನನೆಯುವುದಲ್ಲ. ಕಷ್ಟ ಪರಿಹರಿಸು ಎಂದು ಹರಕೆ ತಿರಸುವುದು ದೇವರಿಗೆ ಲಂಚ ನೀಡಿದಂತೆ. ಅದರ ಬದಲು ಪ್ರತಿನಿತ್ಯ ದೇವರ ಭಜನೆ ಮಾಡಿದರೆ ದೇವರ ಅನುಗ್ರಹ ಲಭಿಸುತ್ತದೆ. ನಾವು ಇಂದು ದೇವಾಲಯಕ್ಕೆ ಭೇಟಿ ನೀಡಲು ಸಮಯ ನೀಡುತ್ತಿಲ್ಲ. ದೇವಾಲಯ ಎಂದರೆ ಸಮುದ್ರವಿದ್ದಂತೆ ಮನೆ ಎಂದರೆ ಬಾವಿ ಇದ್ದಂತೆ. ದೇವಾಲಯದಲ್ಲಿ ಹೋಮ, ಹವನಾದಿ, ಅಭಿಷೇಕಗಳು ನಡೆಯುವುದರಿಂದ ದೇವರ ಸಾನಿಧ್ಯ, ಶಕ್ತಿ ಸಂಚಯ ಹೆಚ್ಚಿರುತ್ತದೆ. ಅದಕ್ಕಾಗಿ ದೇವಾಲಯಗಳಿಗೆ ಹೆಚ್ಚೆಚ್ಚು ಭೇಟಿ ನೀಡಿ. ಶ್ರದ್ಧಾಭಕ್ತಿ ಇದ್ದಾಗ ಮಾತ್ರ ದೇವರ ಅನುಗ್ರಹ ದೊರೆಯುತ್ತದೆ. ಮಹಾದ್ವಾರ ನಿರ್ಮಾಣ ಕಾರ್ಯದಲ್ಲಿ ಪ್ರತ್ಯಕ್ಷ, ಪರೋಕ್ಷವಾಗಿ ಶ್ರಮಿಸಿದವರಿಗೆ ಪುಣ್ಯಸಂಚಯವಾಗುತ್ತದೆ ಎಂದು ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಜಿ.ಜಿ. ಸಭಾಹಿತಮಾತನಾಡಿ, ಪ್ರತಿಯೊಂದು ದೇವಾಲಯದಲ್ಲಿ ಆಚಾರ, ವಿಚಾರ ಪದ್ದತಿಯಾಗಿರಬೇಕು. ದೇವಾಲಯಗಳು ಸಂಸ್ಕಾರ ಬೆಳೆಸುವ ಶ್ರದ್ಧಾಕೇಂದ್ರಗಳಾಗಬೇಕು. ಈ ದಿಸೆಯಲ್ಲಿ ದೇವಾಲಯಗಳು ಶ್ರಮಿಸಬೇಕು ಎಂದರು.

ಶ್ರೀಕ್ಷೇತ್ರದ ವೇ.ಜಯರಾಮ ಅಡಿಗಳರವರನ್ನು ಸನ್ಮಾನಿಸಲಾಯಿತು. ವಿದ್ವಾನ್ ಗಜಾನನ ಭಟ್ ಸಭಾಪೂಜೆ ನೆರವೇರಿಸಿದರು. ಗಣೇಶ ಹೆಗಡೆ ದಂಪತಿಗಳು ಶ್ರೀಗಳಿಗೆ ಫಲಸಮರ್ಪಣೆ ನೀಡಿದರು. ಐಸಿರಿ,ಶ್ರಾವಣಿ ಪ್ರಾರ್ಥಿಸಿದರು. ಗಣೇಶ ಹೆಗಡೆ ಸ್ವಾಗತಿಸಿದರು. ಶಿವಾನಂದ ಹೆಗಡೆ ನಿರೂಪಿಸಿದರು. ಗೋಪಾಲ ಹೆಗಡೆ ವಂದಿಸಿದರು. ಗೇರುಸೊಪ್ಪ ಶ್ರೀ ಸೀಮಾ ಮುಖ್ಯಪ್ರಾಣ ದೇವರ ಪಲ್ಲಕ್ಕಿ ಉತ್ಸವ ನಡೆಯಿತು.

ನಂತರ ದೇವಾಲಯದಲ್ಲಿ ಮಹಾಮಂಗಳಾರತಿ, ಸಭಾಕಾರ್ಯಕ್ರಮದ ನಂತರ ಅನ್ನಸಂತರ್ಪಣೆ ನಡೆಯಿತು. ಸಾವಿರಾರು ಸಂಖ್ಯೆಯಲ್ಲಿ ಭಕ್ತಾಧಿಗಳು ಪಾಲ್ಗೊಂಡಿದ್ದರು. ರಾತ್ರಿ ಭೀಷ್ಮ ವಿಜಯ-ಕೃಷ್ಣಾರ್ಜುನ ಕಾಳಗ ಯಕ್ಷಗಾನ ನಡೆಯಿತು.

ಪಶುಪತಿ ಸೇನಾ ಕ್ರಿಕೆಟ್ ತಂಡಕ್ಕೆ ವೆಂಕಟೇಶ್ವರ ಟ್ರೋಫಿ

• **ಕನ್ನಡಪ್ರಭ ವಾರ್ತೆ** ಭಟ್ಕಳ

ತಾಲೂಕಿನ ಬೆಳಕೆಯ ಸರ್ಕಾರಿ ಪ್ರೌಢಶಾಲೆಯ ಮೈದಾನದಲ್ಲಿ 2 ದಿನಗಳ ಕಾಲ ನಡೆದ ವೆಂಕಟೇಶ್ವರ ಪ್ರೀಮಿಯರ್‌ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಶ್ರೀ ಪಶುಪತಿ ಸೇನಾ ತಂಡವು ಕಿಟ್ಟ ಇಲೆವೆನ್ಸ್ ತಂಡವನ್ನು 14 ರನ್‌ಗಳಿಂದ ಸೋಲಿಸಿ ₹25,555 ಸಾವಿರ ನಗದು ಹಾಗೂ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು. ದ್ವಿತೀಯ ಸ್ಥಾನ ಪಡೆದ ಕಿಟ್ಟ ಇಲೆವೆನ್ಸ್ ತಂಡವು ₹18,555 ನಗದು ಹಾಗೂ ಟ್ರೋಫಿ ಪಡೆಯಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಶ್ರೀ ಪಶುಪತಿ ಸೇನಾ ತಂಡವು 8 ಓವರುಗಳಲ್ಲಿ 3 ವಿಕೆಟ್ ನಷ್ಟಕ್ಕೆ 107ರನ್ ಗಳಿಸಿತು. ಕಿಟ್ಟ ಬಾಯ್ಸ ತಂಡವು 8 ವಿಕೆಟ್ ನಷ್ಟಕ್ಕೆ 94ರನ್ನು ಗಳಿಸಿ 14 ರನ್ನುಗಳಿಂದ ಸೋಲು ಅನುಭವಿಸಿತು. ಪಂದ್ಯಾಟದಲ್ಲಿ ಒಟ್ಟು ಆಯ್ದ 6 ತಂಡಗಳು ಭಾಗವಹಿಸಿದ್ದವು. ಪಂದ್ಯಾವಳಿಯ ಶ್ರೇಷ್ಠ ಆಟಗಾರನಾಗಿ ಶ್ರೀ ಪಶುಪತಿ ತಂಡದ ನವೀನ ನಾಯ್ಕ ಪ್ರಶಸ್ತಿ ಪಡೆದರು. ಉತ್ತಮ ಎಸೆತಗಾರನಾಗಿ ಶ್ರೀ ವೆಂಕಟೇಶ್ವರ ಇಲೆವನ್ಸ್ ತಂಡದ ರವಿ ನಾಯ್ಕ, ಉತ್ತಮ ಬ್ಯಾಟ್ಸಮನ್ ಆಗಿ ಕಿಟ್ಟ ಬಾಯ್ಸ ತಂಡದ ಸಚಿನ್ ನಾಯ್ಕ ಪ್ರಶಸ್ತಿಗೆ ಪಾತ್ರರಾದರು.



ಸಮಾರೋಪ ಹಾಗೂ ಬಹುಮಾನ ವಿತರಣಾ ಕಾರ್ಯಕ್ರಮದಲ್ಲಿ ಅರ್ಬನ್ ಬ್ಯಾಂಕ್ ನಿರ್ದೇಶಕ ಶ್ರೀಧರ ನಾಯ್ಕ, ನಾಮಧಾರಿ ಅಭಿವೃದ್ಧಿ ಸಂಘದ ಗೌರವಾಧ್ಯಕ್ಷ ಕೃಷ್ಣ ನಾಯ್ಕ, ಪತ್ರಕರ್ತ ಮನಮೋಹನ ನಾಯ್ಕ, ರಿಕ್ಷಾ ಚಾಲಕ ಮಾಲಕ ಸಂಘದ ಅಧ್ಯಕ್ಷ ವೆಂಕಟೇಶ ನಾಯ್ಕ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಶ್ರೀಕಾಂತ ನಾಯ್ಕ, ವೆಂಕಟೇಶ್ವರ ಪತ್ತಿನ ಸಂಘದ ಉಪಾಧ್ಯಕ್ಷ ಮಹೇಶ ನಾಯ್ಕ, ಇರ್ಫೋನ್ ಕಂಪನಿಯ ಮಾಲಕ ಗಣಪತಿ ಸೋಡಿಗದ್ದೆ ಪ್ರಮುಖರಾದ ಪ್ರಕಾಶ ನಾಯ್ಕ, ಭಾಸ್ಕರ ನಾಯ್ಕ, ಸಂದೀಪ ಶೇಟ್, ವೆಂಕಟೇಶ ಮೊಗೇರ, ಜಯರಾಮ ಮಹಾಲೆ, ಶಿವಾನಂದ ಮಡಿವಾಳ ಉಪಸ್ಥಿತರಿದ್ದರು.

ರಾಜು ಪೂಜಾರಿ ಹಾಗೂ ಅಮಿತ್ ಮಹಾಲೆ ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದರು. ಮಣಿ ನಾಯ್ಕ ವೀಕ್ಷಕ ವಿವರಣೆಗಾರರಾಗಿ ಕಾರ್ಯನಿರ್ವಹಿಸಿದರು. ವೆಂಕಟೇಶ್ವರ ಪ್ರೀಮಿಯರ್ ಲೀಗ್‌ನ ಆಯೋಜಕರಾದ ಶ್ರೀಧರ ನಾಯ್ಕ, ಪಾಂಡುರಂಗ ನಾಯ್ಕ, ಮಣಿ ಪೂಜಾರಿ, ಈಶ್ವರ ನಾಯ್ಕ ಪಂದ್ಯಾವಳಿಯನ್ನು ಉತ್ತಮವಾಗಿ ಸಂಘಟಿಸಿದರು.

ಹುಬ್ಬಳ್ಳಿ-ರೈಲು ಮಾರ್ಗದ ಕನಸು ಸಾಕಾರಕ್ಕೆ ಅವಿರತ ಹೋರಾಟ

ಹಿರಿಯ ರಾಜಕೀಯ ಮುತ್ಸದ್ಧಿ ರಮಾನಂದ ನಾಯಕ ನಿಧನ

• **ಕನ್ನಡಪ್ರಭ ವಾರ್ತೆ** ಅಂಕೋಲಾ

ಉತ್ತರ ಕನ್ನಡ ಜಿಲ್ಲಾ ಪರಿಷತ್‌ನ ಪ್ರಥಮ ಅಧ್ಯಕ್ಷ, ಹಿರಿಯ ಮುತ್ಸದ್ದಿ ರಮಾನಂದ ನಾಯಕ ಹಿಚ್ಕಡ (78) ಗುರುವಾರ ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ.

ರಮಾನಂದ ನಾಯಕ ಕಾರವಾರ-ಅಂಕೋಲಾ ವಿಧಾನಸಭಾ ಕ್ಷೇತ್ರದಲ್ಲಿ ಒಮ್ಮೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿದ್ದರು. ಅಜಾತಶತ್ರುವಾಗಿ ರಾಜಕೀಯವಾಗಿ ಎಲ್ಲ ಪಕ್ಷದವರಿಂದ ಗೌರವಕ್ಕೆ ಪಾತ್ರರಾದರು. ದೇಶಭಕ್ತಿ, ನಿಷ್ಠೆ ಮತ್ತು ತ್ಯಾಗದ ವಾತಾವರಣದಲ್ಲಿ ಬೆಳೆಯುವ ಮೂಲಕ ಸಮಾಜಸೇವೆಯ ಮೌಲ್ಯಗಳನ್ನು ಬಾಲ್ಯದಿಂದಲೇ ಅಳವಡಿಸಿಕೊಂಡರು.



ಶಿಕ್ಷಣ, ಆರೋಗ್ಯ, ರಸ್ತೆ, ಕುಡಿಯುವ ನೀರು, ಗ್ರಾಮೀಣ ಉದ್ಯೋಗ ಎಲ್ಲ ಕ್ಷೇತ್ರಗಳಲ್ಲಿಯೂ ವಿಶಿಷ್ಟ ಸೇವೆ ಸಲ್ಲಿಸಿದ ಕೀರ್ತಿ ಸಲ್ಲುತ್ತದೆ. ಉಕ ಜಿಲ್ಲೆಯ ಅಭಿವೃದ್ಧಿಗೆ ಅಗತ್ಯವಿದ್ದ ಅಂಕೋಲಾ ಹುಬ್ಬಳ್ಳಿ- ರೈಲು ಮಾರ್ಗದ ಕನಸು ಸಾಕಾರಗೊಳಿಸುವ ಹೋರಾಟಕ್ಕೆ ರಮಾನಂದ ನಾಯಕರು ತಮ್ಮ ಸಂಪೂರ್ಣ ಶಕ್ತಿಯನ್ನು ಸಮರ್ಪಿಸಿದರು.

ಮೃತರಿಗೆ ಪತ್ನಿ, ಮೂವರು ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವಿದೆ.

ಸಂತಾಪ: ರಮಾನಂದ ನಾಯಕರ ನಿಧನಕ್ಕೆ ಸಚಿವ ಮಂಕಾಳ ವೈದ್ಯ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಆರ್.ವಿ. ದೇಶಪಾಂಡೆ, ಶಿವರಾಮ ಹೆಬ್ಬಾರ, ಸತೀಶ ಸೈಲ್, ವಿಧಾನಪರಿಷತ್ ಸದಸ್ಯ ಗಣಪತಿ ಉಳ್ವೇಕರ, ಮಾಜಿ ಶಾಸಕಿ ರೂಪಾಲಿ ನಾಯ್ಕ, ಪುರಸಭೆ ಮಾಜಿ ಅಧ್ಯಕ್ಷ ಭಾಸ್ಕರ ನಾರ್ವೇಕರ, ಕಾಂಗ್ರೆಸ್ ರಾಜ್ಯ ಪ್ರಮುಖ ಗೋಪಾಲಕೃಷ್ಣ ನಾಯಕ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಾಯಿ ಗಾಂವಕರ, ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ಸುಜಾತಾ ಗಾಂವಕರ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

ಮಾಜಿ ಶಾಸಕಿ ರೂಪಾಲಿ ಸಂತಾಪ

• **ಕನ್ನಡಪ್ರಭ ವಾರ್ತೆ** ಕಾರವಾರ

ಆದರ್ಶರಾಜಕಾರಣಿ,ಜನಸೇವಕರಾದ ರಮಾನಂದ ನಾಯಕ ಅವರ ನಿಧನಕ್ಕೆ ಬಿಜೆಪಿ ರಾಜ್ಯ ಉಪಾಧ್ಯಕ್ಷೆ, ಕಾರವಾರ ಅಂಕೋಲಾ ಕ್ಷೇತ್ರದ ಮಾಜಿ ಶಾಸಕಿ ರೂಪಾಲಿ ಎಸ್. ನಾಯ್ಕ ಸಂತಾಪ ವ್ಯಕ್ತಪಡಿಸಿದ್ದಾರೆ.

ರಮಾನಂದ ನಾಯಕ ಜಿಲ್ಲಾ ಪರಿಷತ್ ವ್ಯವಸ್ಥೆ ಬಂದ ಆರಂಭದಲ್ಲೆ ಅಧ್ಯಕ್ಷ ಸ್ಥಾನಕ್ಕೇರಿ ಮಾದರಿಯಾಗಿ ಕೆಲಸ ಮಾಡಿದವರು. ಸರಳ, ಸಜ್ಜನರಾಗಿ ಧಾರ್ಮಿಕ, ಸಾಮಾಜಿಕ ಚಟುವಟಿಕೆಗಳಲ್ಲೂ ತೊಡಗಿಕೊಂಡಿದ್ದರು.

ಅದರಲ್ಲೂ ಅಂಕೋಲಾ-ಹುಬ್ಬಳ್ಳಿ ರೈಲು ಮಾರ್ಗಕ್ಕಾಗಿ ಸತತ ಹೋರಾಟ ಮಾಡುವ ಮೂಲಕ ಜನಮೆಚ್ಚುಗೆಗೆ ಪಾತ್ರರಾಗಿದ್ದರು. ಅವರನ್ನು ಕಳೆದು ಕೊಂಡಿರುವುದು ದುರ್ದೈವದ ಸಂಗತಿಯಾಗಿದ್ದು ಅವರ ಆತ್ಮಕ್ಕೆ ಭಗವಂತ ಶಾಂತಿ ಕರುಣಿಸಲಿ, ಅವರ ಕುಟುಂಬಕ್ಕೆ, ಅಭಿಮಾನಿಗಳಿಗೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುವುದಾಗಿ ರೂಪಾಲಿ ನಾಯ್ಕ ತಿಳಿಸಿದ್ದಾರೆ.

ಸಾಮಾಜಿಕ, ಸಾಂಸ್ಕೃತಿಕ ಕ್ಷೇತ್ರಕ್ಕೂ ಹಾನಿ: ಬಿ.ಎನ್. ವಾಸರೆ

• **ಕನ್ನಡಪ್ರಭ ವಾರ್ತೆ** ದಾಂಡೇಲಿ

ಉತ್ತರಕನ್ನಡ ಜಿಲ್ಲೆಯ ಮೊದಲ ಜಿಲ್ಲಾ ಪರಿಷತನ ಅಧ್ಯಕ್ಷ, ಸಜ್ಜನ ರಾಜಕಾರಣಿ ರಮಾನಂದ ನಾಯಕರ ಅಗಲುವಿಕೆ ಕೇವಲ ರಾಜಕೀಯ ಕ್ಷೇತ್ರಕ್ಕಷ್ಟೇ ಅಲ್ಲ. ಈ ಜಿಲ್ಲೆಯ ಸಾಮಾಜಿಕ, ಸಾಂಸ್ಕೃತಿಕ ಕ್ಷೇತ್ರಕ್ಕೂ ಕೂಡಾ ತುಂಬಲಾರದಷ್ಟು ಹಾನಿಯನ್ನುಂಟು ಮಾಡಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಎನ್. ವಾಸರೆ ಎಂದು ಸಂತಾಪ ವ್ಯಕ್ತಪಡಿಸಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತಿನ ಹಿರಿಯ ಆಜೀವ ಸದಸ್ಯರಾಗಿದ್ದ ಇವರು ಪರಿಷತ್ತಿನ ಜೊತೆ ನಿಕಟವಾದ ಬಾಂಧವ್ಯ ಇಟ್ಟುಕೊಂಡಿದ್ದರು. ಅವರ ವ್ಯಕ್ತಿತ್ವ ಮತ್ತು ವಿಚಾರಗಳು ಮುಂದಿನ ತಲೆಮಾರಿಗೆ ಮಾದರಿಯಾಗುವಂತಾಗಲಿ ಎಂದು ತಿಳಿಸಿದ್ದಾರೆ.

ಯಂತ್ರ ಹೊತ್ತಿದ್ದ ವಾಹನ ಪಲ್ಟಿ, ಸಂಚಾರ ಅಸ್ತವ್ಯಸ್ತ

• **ಕನ್ನಡಪ್ರಭ ವಾರ್ತೆ** ಕಾರವಾರ

ಕೈಗಾ ಅಣುಸ್ಥಾವರದ ವಿಸ್ತರಿತ 5 ಮತ್ತು 6ನೇ ಘಟಕಗಳಿಗಾಗಿ ಗುಜರಾತ್‌ನಿಂದ ಸಾಗಿಸಲಾಗುತ್ತಿದ್ದ ಬೃಹತ್ ಯಂತ್ರೋಪಕರಣದ ವಾಹನವೊಂದು ಗುರಿ ತಲುಪುವ ಕೆಲವೇ ಕಿಮೀಗಳ ದೂರದಲ್ಲೇ ಪಲ್ಟಿಯಾದ ಘಟನೆ ತಾಲ್ಲೂಕಿನ ಹರ್ಟುಗಾ ಗ್ರಾಮದ ಬಳಿ ನಡೆದಿದೆ. ಭಾರಿ ಗಾತ್ರದ ಯಂತ್ರದ ಭಾಗವು ರಸ್ತೆಯಂಚಿಗೆ ಉರುಳಿ ಬಿದ್ದ ಪರಿಣಾಮ ಮಲ್ಲಾಪುರ-ಕೈಗಾ ರಸ್ತೆಯಲ್ಲಿ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

ಮಲ್ಲಾಪುರದಿಂದ ಕೈಗಾಕ್ಕೆ ಸಂಪರ್ಕಿಸುವ ಮಾರ್ಗದ ಹರ್ಟುಗಾ ಗ್ರಾಮದ ಬಳಿಯ ತಿರುವಿನಲ್ಲಿ ಈ ಅವಘಡ ಸಂಭವಿಸಿದೆ. ವಾಹನವು ಹೊತ್ತಿದ್ದ ಯಂತ್ರವು ಅತ್ಯಂತ ಭಾರಿ ತೂಕ ಮತ್ತು ಗಾತ್ರದ್ದಾಗಿದ್ದರಿಂದ, ತಿರುವಿನಲ್ಲಿ ಚಲಿಸುವಾಗ ಏಕಾಏಕಿ ಒಂದು ಬದಿಗೆ ವಾಲಿದೆ. ಚಾಲಕನ ನಿಯಂತ್ರಣ ತಪ್ಪಿದ ವಾಹನವು ಯಂತ್ರದ ಸಮೇತ ರಸ್ತೆಯ ಪಕ್ಕಕ್ಕೆ ಅಡ್ಡಲಾಗಿ ಬಿದ್ದಿದೆ.


ಕೈಗಾ ಯೋಜನಾ ಪ್ರದೇಶ ತಲುಪಲು ಕೇವಲ 3 ರಿಂದ 4 ಕಿಮೀ ದೂರವಿರುವಾಗಲೇ ಈ ದುರ್ಘಟನೆ ನಡೆದಿದೆ.

ಈ ಬೃಹತ್ ಯಂತ್ರದ ಭಾಗವು ಕಳೆದ ಫೆಬ್ರುವರಿ ತಿಂಗಳಿನಲ್ಲಿ ಗುಜರಾತ್‌ನಿಂದ ತನ್ನ ಪ್ರಯಾಣ ಆರಂಭಿಸಿತ್ತು. ಏ. 15ರಂದು ಕಾರವಾರವನ್ನು ಪ್ರವೇಶಿಸಿದ್ದ ಈ ವಾಹನ, ಯಂತ್ರದ ಗಾತ್ರದ ಹಿನ್ನೆಲೆ ಅತೀ ನಿಧಾನವಾಗಿ ಚಲಿಸುತ್ತಿತ್ತು. ಕಳೆದ 20 ದಿನಗಳಿಂದ ಕಾರವಾರದಿಂದ ಕೈಗಾ ಮಾರ್ಗದಲ್ಲಿ ಸಂಚರಿಸುತ್ತಿದ್ದ ಈ ವಾಹನ, ಕೊನೆಗೂ ನಿಗದಿತ ಸ್ಥಳ ತಲುಪುವ ಮುನ್ನವೇ ಅಪಘಾತಕ್ಕೀಡಾಗಿದೆ.

ಭಾರಿ ವಾಹನವು ರಸ್ತೆಯ ಮೇಲೆ ಅಡ್ಡಲಾಗಿ ಬಿದ್ದಿರುವುದರಿಂದ ಈ ಮಾರ್ಗದ ವಾಹನ ಸಂಚಾರಕ್ಕೆ ಭಾರಿ ಅಡಚಣೆಯುಂಟಾಗಿದೆ. ಕೈಗಾಕ್ಕೆ ತೆರಳುವ ಸಿಬ್ಬಂದಿ ಹಾಗೂ ಸ್ಥಳೀಯ ನಾಗರಿಕರು ತೊಂದರೆ ಅನುಭವಿಸುವಂತಾಗಿದೆ. ಸ್ಥಳಕ್ಕೆ ಕೈಗಾ ಅಧಿಕಾರಿಗಳು ಹಾಗೂ ಪೊಲೀಸರು ಭೇಟಿ ನೀಡಿದ್ದು, ಬೃಹತ್ ಕ್ರೇನ್‌ಗಳ ಸಹಾಯದಿಂದ ಯಂತ್ರವನ್ನು ಮೇಲೆತ್ತಲು ಮತ್ತು ರಸ್ತೆ ತೆರವುಗೊಳಿಸಲು ಸಿದ್ಧತೆ ನಡೆಸಿದ್ದಾರೆ. ಯಂತ್ರೋಪಕರಣಕ್ಕೆ ಆಗಿರುವ ಹಾನಿಯ ಬಗ್ಗೆ ತಾಂತ್ರಿಕ ತಜ್ಞರ ತಂಡದಿಂದ ಪರಿಶೀಲನೆ ನಡೆಯಬೇಕಿದೆ.

ಬಿಸಿಲಕೊಪ್ಪಕ್ಕೆ ರಾ.ಹೆ. ಪ್ರಾಧಿಕಾರದ ಯೋಜನಾ ನಿರ್ದೇಶಕರ ಭೇಟಿ

• **ಕನ್ನಡಪ್ರಭ ವಾರ್ತೆ** ಶಿರಸಿ

ತಾಲೂಕಿನ ಬಿಸಿಲಕೊಪ್ಪ ಗ್ರಾಮಕ್ಕೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಶಿವಕುಮಾರ್ ಗುರುವಾರ ಭೇಟಿ ನೀಡಿದರು.

ಕಳೆದ ಮೂರು ದಿನಗಳ ಹಿಂದೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅವ್ಯವಸ್ಥೆಯ ಕುರಿತು ನಡೆದ ಪ್ರತಿಭಟನೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರು ಪ್ರತಿಭಟನಾ ಸ್ಥಳಕ್ಕೆ ಬರಬೇಕು ಎಂದು ಸಾರ್ವಜನಿಕರು ಪಟ್ಟು ಹಿಡಿದಿದ್ದರು. ಕಾರಣಾಂತರದಿಂದ ಅವರು ಪ್ರತಿಭಟನಾ ಸ್ಥಳಕ್ಕೆ ಬರಲು ಸಾಧ್ಯವಾಗಿರಲಿಲ್ಲ.

ಆಗ ಅವರು ಮೊಬೈಲ್ ಸಂಭಾಷಣೆ ಮೂಲಕ ಇನ್ನು ಮೂರು ದಿನದೊಳಗೆ ಬರುತ್ತೇನೆ ಎಂದು ಭರವಸೆ ನೀಡಿದ್ದರು. ಅದರಂತೆ ಗ್ರಾಮಕ್ಕೆ ಭೇಟಿ ನೀಡಿ ಬಿಸಿಲುಕೊಪ್ಪದಿಂದ ಚಿಪಗೀಯವರೆಗೆ ರಸ್ತೆ ಪರಿಶೀಲನೆ ನಡೆಸಿದರು.

ಬಳಿಕ ಮಾತನಾಡಿದ ಅವರು, ಇನ್ನೊಂದು 15ರಿಂದ 20 ದಿನದ ಒಳಗಾಗಿ ರಸ್ತೆಯ ಅಕ್ಕಪಕ್ಕದಲ್ಲಿರುವ ಚರಂಡಿ ಹಾಗೂ ವಿದ್ಯುತ್ ಕಂಬ ಸ್ಥಳಾಂತರಿಸಿ ರಸ್ತೆಗೆ ಹಾಕಿರುವ ಜಲ್ಲಿಯನ್ನು ಸರಿಪಡಿಸಿ ಸಾರ್ವಜನಿಕರಿಗೆ ಸುಗಮವಾಗಿ ಸಂಚರಿಸಲು ಅನುಕೂಲ ಮಾಡಿಕೊಡುತ್ತೇವೆ ಎಂದು ಭರವಸೆ ನೀಡಿದರು.

ಅಲ್ಲದೆ ರಸ್ತೆ ಕಾಮಗಾರಿ ಮುಗಿಯುವವರೆಗೂ ಸಾರ್ವಜನಿಕರಿಗೆ ಯಾವುದೇ ರೀತಿಯ ಧೂಳಿನ ಸಮಸ್ಯೆ ಆಗದಂತೆ ರಸ್ತೆಗೆ ಟ್ಯಾಂಕರ್‌ಮೂಲಕ ನೀರನ್ನು ಸಿಂಪಡಿಸಲಾಗುವುದು ಎಂದು ಹೇಳಿದರು. ಈ ಸಂದರ್ಭ ಎಸಿ ಚಂದ್ರಶೇಖರ ಆರ್.ಜಿ.ಆರ್., ರೈತ ಸಂಘಟನೆಗಳು, ಪ್ರತಿಭಟನಾಕಾರರು ಇದ್ದರು.


ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರು ಬಿಸಿಲುಕೊಪ್ಪದಿಂದ ಚಿಪಗೀಯವರೆಗೆ ರಸ್ತೆ ಪರಿಶೀಲನೆ ನಡೆಸಿದರು.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖಿ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಾಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.


ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್‌ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್‌ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರದರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ವಿಶ್ವ ಕಾರ್ಮಿಕ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಯಲ್ಲಾಪುರ

ತಾಲೂಕಾ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮಾಸಿಕ ಸಭೆ, ಪಪಂ ವ್ಯಾಪ್ತಿಯ ಶಿಬಿರ ಹಾಗೂ ವಿಶ್ವ ಕಾರ್ಮಿಕ ದಿನಾಚರಣೆ ಬುಧವಾರ ತಾಪಂ ಸಭಾಭವನದಲ್ಲಿ ನಡೆಯಿತು. ತಹಶೀಲ್ದಾರ್ ಚಂದ್ರಶೇಖರ್‌ಹೊಸಮನಿ ಸಭೆ ಹಾಗೂ ಸಂಜೀವಿನಿ ವಾರದ ಸಂತೆ ಉದ್ಘಾಟಿಸಿ ಮಾತನಾಡಿದರು. ದೇವಿದಾಸ ಶಾನಭಾಗ ಅಧ್ಯಕ್ಷತೆ ವಹಿಸಿದ್ದರು. ಸಮಿತಿಯ ಸದಸ್ಯ ಕಾರ್ಯದರ್ಶಿ ರಾಜೇಶ್ ಧನವಾಡಕರ್, ಸದಸ್ಯರಾದ ಅನಂತ ಗೌಡ, ಟಿ.ಸಿ. ಗಾಂವ್ಕರ್, ಶಿವಾನಂದ ನಾಯ್ಕ, ಅನಿಲ್ ಮರಾಠೆ, ಮುಷರತ್ ಖಾನ್, ಅನಂತ ಕೋಟೆಮನೆ, ಬಸ್ತ್ಯಾವ್ ಬಾಳಗುಂದಿಕರ್, ಫಕೀರ್‌ಹರಿಜನ, ಹೆಸ್ಕಾಂ, ಸಾರಿಗೆ, ಆಹಾರ ಹಾಗೂ ಸಿಡಿಪಿಓ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ವಿಶ್ವ ಕಾರ್ಮಿಕ ದಿನಾಚರಣೆ ಅಂಗವಾಗಿ ಪಪಂ ಯಲ್ಲಾಪುರ ಪೌರಕಾರ್ಮಿಕರಾದ ದೇಮಣ್ಣ ಹರಿಜನ ಹಾಗೂ ಸಂಕಮ್ಮ ಮಾದರ ಅವರನ್ನು ಸನ್ಮಾನಿಸಲಾಯಿತು. ಸಮಿತಿ ಸದಸ್ಯ ಕಾರ್ಯದರ್ಶಿ ರಾಜೇಶ್ ಧನವಾಡಕರ್‌ಮಾತನಾಡಿದರು. ಕುಷ್ಟ ರೋಗದ ಬಗ್ಗೆ ಹಾಗೂ ಔಷಧೋಪಚಾರದ ಬಗ್ಗೆ ತಾಲೂಕಾ ಆರೋಗ್ಯಾಧಿಕಾರಿಗಳು ಮಾಹಿತಿ ನೀಡಿದರು. ಸಮಿತಿ ಸದಸ್ಯರಾದ ಎಂ.ಕೆ. ಭಟ್ಟ ಸ್ವಾಗತಿಸಿದರು. ಮಹೇಶ ನಾಯ್ಕ ನಿರೂಪಿಸಿ, ವಂದಿಸಿದರು.

ಗರಿಷ್ಠ 34°C | ಕನಿಷ್ಠ 24°C

ಸುದ್ದಿ ಸಿಂಚನ

ಜಾಹೀರಾತು ನಂಬಿ ₹10 ಲಕ್ಷ ಕಳೆದುಕೊಂಡ ನಿವೃತ್ತ ಸೈನಿಕ

ದಾಂಡೇಲಿ: ಫೇಸ್‌ಬುಕ್‌ನಲ್ಲಿ ಕಾಣಿಸಿದ ಜಾಹಿರಾತು ನೋಡಿ ಇಲ್ಲಿನ ನಿವೃತ್ತ ಸೈನಿಕರೊಬ್ಬರು ಬರೊಬ್ಬರಿ ₹10 ಲಕ್ಷ ಕಳೆದುಕೊಂಡ ಘಟನೆ ನಡೆದಿದೆ. ದಾಂಡೇಲಿಯ ಸಾಯಿ ನಗರದಲ್ಲಿ ದಿವಾಕರ ನಾರಾಯಣ ಅವರು ವಾಸವಾಗಿದ್ದಾರೆ. 66 ವರ್ಷದ ಅವರು ನಿವೃತ್ತ ಸೈನಿಕರಾಗಿದ್ದು, ಅತ್ಯಂತ ಶಿಸ್ತಿನಿಂದ ಬದುಕಿದವರಾ ಗಿದ್ದಾರೆ. ಆದರೆ, ಹಣದ ಆಸೆಗೆ ಬಿದ್ದ ಅವರ ಪತ್ನಿ ಫೇಸ್‌ಬುಕ್ ಕಾಣಿಸಿದ ಜಾಹಿರಾತು ನೋಡಿ ಮೋಸ ಹೋಗಿದ್ದಾರೆ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಜಂಟಿ ಖಾತೆಯಲ್ಲಿದ್ದ ಹಣವನ್ನು ಅವರು ಕಳೆದುಕೊಂಡಿದ್ದಾರೆ. 2025ರಲ್ಲಿ ಫೇಸ್ಬುಕ್ ನೋಡುತ್ತಿರುವಾಗ ಡಾಲರ್‌ಲೆಕ್ಕದಲ್ಲಿ ದುಡ್ಡುಗಳಿಸಿ ಎಂಬ ಜಾಹಿರಾತು ನೋಡಿದರು. ಆ ಜಾಹಿರಾತು ಮೇಲೆ ಕ್ಲಿಕ್ ಮಾಡಿದರು. ಆಗ ಅಲ್ಲಿ ಹೊಸ ವೆಬ್‌ಸೈಟ್ ತೆರೆದುಕೊಂಡಿದ್ದು, ಅಲ್ಲಿ ತಮ್ಮ ವೈಯಕ್ತಿಕ ವಿವರ ದಾಖಲಿಸಿದರು. ಅದಾದ ನಂತರ ನೋಂದಣಿ ಶುಲ್ಕ ಎಂದು ₹10 ಸಾವಿರ ಹಾಗೂ ₹12 ಸಾವಿರ ಪಾವತಿ ಮಾಡಿದರು. ಡಿಸೆಂಬರ್‌ಅವಧಿಯಲ್ಲಿ ಡಾಲರ್ ದುಡ್ಡನ್ನು ರೂಪಾಯಿಗೆ ಪರಿವರ್ತಿಸಲು ಹಣ ಕೊಡಬೇಕು ಎಂಬ ಫೋನ್ ಬಂದಿದ್ದು, ಅಲ್ಲಿಯೂ ಹಣ ಪಾವತಿಸಿದರು. ಈವರೆಗೆ ₹10,60,346 ಹಣ ಹೂಡಿಕೆ ಮಾಡಿ ಮೋಸ ಹೋದರು. ಮೋಸ ಹೋಗಿರುವುದು ಗೊತ್ತಾದಂತೆ ನಗರದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದರು. ಪಿಎಸ್‌ಐ ಕಿರಣ ಪಾಟೀಲ ತನಿಖೆ ನಡೆಸುತ್ತಿದ್ದಾರೆ.

ಬೈಕ್ ಡಿಕ್ಕಿ: ವೃದ್ಧನಿಗೆ ಗಂಭೀರ ಗಾಯ

ಹೊನ್ನಾವರ: ತಾಲೂಕಿನ ಕವಲಕ್ಕಿ ಬಳಿಯ ರಾಷ್ಟ್ರೀಯ ಹೆದ್ದಾರಿ 69ರಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ರಸ್ತೆ ದಾಟುತ್ತಿದ್ದ 90 ವರ್ಷದ ವೃದ್ಧರೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಗೊಂಡ ವೃದ್ಧರನ್ನು ಈಶ್ವರ ನಾರಾಯಣ ಹೆಗಡೆ (90) ಎಂದು ಗುರುತಿಸಲಾಗಿದೆ. ಇವರು ರಸ್ತೆ ದಾಟಿ ಕವಲಕ್ಕಿ ಲಕ್ಷ್ಮಿ ಮೆಡಿಕಲ್ ಕಡೆಗೆ ನಡೆದುಕೊಂಡು ಹೋಗುತ್ತಿದ್ದಾಗ ಈ ಅವಘಡ ಸಂಭವಿಸಿದೆ.ಹೊನ್ನಾವರ ಕಡೆಯಿಂದ ಹಡಿನಬಾಳ ಕಡೆಗೆ ಬಂದ ಬೈಕ್ ರಸ್ತೆ ದಾಟುತ್ತಿದ್ದ ವೃದ್ಧನಿಗೆ ಬಲವಾಗಿ ಡಿಕ್ಕಿ ಹೊಡೆದಿದೆ. ಈಶ್ವರ ಹೆಗಡೆ ರಸ್ತೆಯ ಮೇಲೆ ಬಿದ್ದು ತಲೆ, ಎಡಗೈ ಹಾಗೂ ಕಾಲುಗಳಿಗೆ ಗಂಭೀರವಾಗಿ ಪೆಟ್ಟು ಬಿದ್ದಿದೆ. ತಕ್ಷಣ ಸ್ಥಳೀಯರು ಹಾಗೂ ಕುಟುಂಬಸ್ಥರು ಗಾಯಾಳುವನ್ನು ಹೊನ್ನಾವರ ತಾಲೂಕು ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ, ಗಾಯದ ಸ್ವರೂಪ ತೀವ್ರವಾಗಿದ್ದರಿಂದ ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗಾಗಿ ಅವರನ್ನು ಶಿವಮೊಗ್ಗದ ಆಸ್ಪತ್ರೆಗೆ ರವಾನಿಸಲಾಗಿದೆ. ಈ ಬಗ್ಗೆ ಗಣೇಶ ಹೆಗಡೆ ಅವರು ಹೊನ್ನಾವರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೂರಿನ ಅನ್ವಯ ಪ್ರಕರಣ ದಾಖಲಾಗಿದೆ.

ನಾಳೆ ಕಾರ್ಯಕ್ರಮ

ಸಿದ್ದಾಪುರ: ತಾಲೂಕಿನ ವಾಜಗದ್ದೆ ಸಮೀಪದ ಶಾನಬಾಳೆಗದ್ದೆಯ ಶ್ರೀ ಶನೇಶ್ವರ ದೇವಸ್ಥಾನ ಟ್ರಸ್ಟ್ ಇವರಿಂದ ಶನೇಶ್ವರ ದೇವರಸನ್ನಿಧಿಯಲ್ಲಿ ಸಂಪ್ರೋಕ್ಷಣ್ಯ ಕಾರ್ಯಕ್ರಮದ ಪ್ರಯುಕ್ತ ಮೇ 9ರಂದು ಮಧ್ಯಾಹ್ನ 2.30ರಿಂದ ಗಾನಸಂಪ್ರೋಕ್ಷಣ್ಯ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಯಕ್ಷಗಾನದ ಪೌರಾಣಿಕ ಪ್ರಸಂಗಗಳ ಅಪರೂಪದ ಪದ್ಯಗಳು ಪ್ರಸ್ತುತಗೊಳ್ಳಲಿದೆ. ಭಾಗವತರಾಗಿ ರಾಘವೇಂದ್ರ ಆಚಾರ್ಯ ಜನ್ಸಾಲೆ, ರಾಮಕೃಷ್ಣ ಹೆಗಡೆ ಹಿಲ್ಲೂರು, ಮದ್ದಳೆಯಲ್ಲಿ ಶಶಾಂಕ ಆಚಾರ್ಯ ಕಿರುಮಂಜೇಶ್ವರ, ಶ್ರೀವತ್ಸ ಗುಡ್ಡೆದಿಂಬ, ಚಂಡೆಯಲ್ಲಿ ವಿಘ್ನೇಶ್ವರ ಗೌಡ ಕೆಸರಕೊಪ್ಪ, ಪ್ರಜ್ವಲ್ ಮುಂಡಾಡಿ ಪಾಲ್ಗೊಳ್ಳಲಿದ್ದಾರೆ.

ಅಡಕೆ ಧಾರಣೆ

• ಸಿದ್ದಾಪುರ	ಕನಿಷ್ಠ	ಗರಿಷ್ಠ
ರಾಶಿ	46600	53899
ತಟ್ಟಿಬೆಟ್ಟೆ	33900	33900
ಕೆಂಪಗೋಟು	28900	34900
ಬಿಳಿಗೋಟು	27800	35389
ಚಾಲಿ	39399	47329
ಕೋಕಾ	23699	33589



ಯಲ್ಲಾಪುರ ತಾಲೂಕಿನ ಚಂದಗುಳಿ ಘಂಟೆ ಗಣಪತಿ ದೇವಸ್ಥಾನಕ್ಕೆ ಶಾಸಕ ಶಿವರಾಮ ಹೆಬ್ಬಾರ ಭೇಟಿ ನೀಡಿ ಅಂಗಾರಕ ಸಂಕಷ್ಠಿ ಪ್ರಯುಕ್ತ ವಿಶೇಷ ಪೂಜೆ ಸಲ್ಲಿಸಿದರು. ಲಕ್ಷ್ಮೀನಾರಾಯಣ ಭಟ್ಟ ತಾರೀಮಕ್ಕಿ, ಎಲ್.ಪಿ. ಭಟ್ಟ ಗುಂಡ್ಕಲ್, ಆರ್.ಎಸ್ ಭಟ್ಟ, ನರಸಿಂಹ ಭಟ್ಟ ಗುಂಡ್ಕಲ್ ಮತ್ತಿತರರು ಇದ್ದರು.



ಯಲ್ಲಾಪುರ ತಾಲೂಕಾ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಮಾಸಿಕ ಸಭೆ, ಪಪಂ ವ್ಯಾಪ್ತಿಯ ಶಿಬಿರ ಹಾಗೂ ವಿಶ್ವ ಕಾರ್ಮಿಕ ದಿನಾಚರಣೆ ತಾಪಂ ಸಭಾಭವನದಲ್ಲಿ ನಡೆಯಿತು. ಈ ವೇಳೆ ತಹಶೀಲ್ದಾರ್ ಚಂದ್ರಶೇಖರ್‌ಹೊಸಮನಿ ಮತ್ತಿತರರು ಇದ್ದರು.

ಡೊನೇಷನ್ ದಂಧೆಗೆ ಬ್ರೇಕ್ ಹಾಕಿ

ಭಾರತ ವಿದ್ಯಾರ್ಥಿ ಫೆಡರೇಶನ್ ಉತ್ತರ ಕನ್ನಡ ಜಿಲ್ಲಾ ಸಮಿತಿ ಒತ್ತಾಯ



ಭಾರತ ವಿದ್ಯಾರ್ಥಿ ಫೆಡರೇಶನ್ ಉತ್ತರ ಕನ್ನಡ ಜಿಲ್ಲಾ ಸಮಿತಿಯಿಂದ ಮನವಿ ಸಲ್ಲಿಸಲಾಯಿತು.

- ಪೋಷಕರಿಂದ ಲಕ್ಷಾಂತರ ರೂಪಾಯಿ ಡೊನೇಷನ್ ವಸೂಲಿ ಮಾಡುವ ಮೂಲಕ ಶಿಕ್ಷಣವನ್ನು ವ್ಯಾಪಾರೀಕರಣಗೊಳಿಸುತ್ತಿವೆ
- ಖಾಸಗಿ ಶಾಲೆಗಳಲ್ಲಿ ಪುಸ್ತಕ, ನೋಟ್‌ಬುಕ್, ಬ್ಯಾಗ್, ಬೂಟು ಮತ್ತು ಸಮವಸ್ತ್ರಗಳನ್ನು ಶಾಲೆಯಲ್ಲೇ ಖರೀದಿಸಬೇಕು ಎಂದು ಪೋಷಕರ ಮೇಲೆ ಒತ್ತಡ
- ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವ ಸಂಸ್ಥೆಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ತಾಲೂಕುವಾರು ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು

• **ಕನ್ನಡಪ್ರಭ ವಾರ್ತೆ** ಕಾರವಾರ

2026-27ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭವಾಗುತ್ತಿರುವ ಬೆನ್ನಲ್ಲೇ ಖಾಸಗಿ ಶಿಕ್ಷಣ ಸಂಸ್ಥೆಗಳ ಡೊನೇಷನ್ ಹಾವಳಿ ಮಿತಿಮೀರಿದ್ದು, ಇದನ್ನು ನಿಯಂತ್ರಿಸಲು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರವನ್ನು ತಕ್ಷಣವೇ ರಚಿಸಬೇಕು ಎಂದು ಭಾರತ ವಿದ್ಯಾರ್ಥಿ ಫೆಡರೇಶನ್ ಉತ್ತರ ಕನ್ನಡ ಜಿಲ್ಲಾ ಸಮಿತಿ ಒತ್ತಾಯಿಸಿದೆ.

ಈ ಕುರಿತು ಮುಖ್ಯಮಂತ್ರಿ ಹಾಗೂ ಉತ್ತರಕನ್ನಡ ಜಿಲ್ಲಾಧಿಕಾರಿಗೆ ಗುರುವಾರ ಮನವಿ ಸಲ್ಲಿಸಿರುವ ಸಂಘಟನೆಯು, ಶಿಕ್ಷಣ ಹಕ್ಕು ಕಾಯ್ದೆಯನ್ನು ಉಲ್ಲಂಘಿಸುವ ಶಾಲೆಗಳ ಮಾನ್ಯತೆ ರದ್ದುಗೊಳಿಸಬೇಕು ಎಂದು ಆಗ್ರಹಿಸಿದೆ. ಶಿಕ್ಷಣ ಹಕ್ಕು ಕಾಯ್ದೆ-2009ರ ಪ್ರಕಾರ ಪ್ರತಿ ಖಾಸಗಿ ಶಾಲೆಯೂ ತಾನು ಪಡೆಯುವ ಶುಲ್ಕದ ವಿವರವನ್ನು ಶಾಲಾ ಜಾಲತಾಣ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಕಡ್ಡಾಯ. ಆದರೆ, ಜಿಲ್ಲೆಯ ಬಹುತೇಕ ಅನುದಾನ ರಹಿತ ಶಾಲೆಗಳು ಈ ನಿಯಮವನ್ನು ಸಂಪೂರ್ಣವಾಗಿ ಕಡೆಗಣಿಸಿವೆ. ಪೋಷಕರಿಂದ ಲಕ್ಷಾಂತರ ರೂಪಾಯಿ ಡೊನೇಷನ್ ವಸೂಲಿ ಮಾಡುವ ಮೂಲಕ ಶಿಕ್ಷಣವನ್ನು ವ್ಯಾಪಾರೀಕರಣಗೊಳಿಸುತ್ತಿವೆ ಎಂದು ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾ ಸಂಚಾಲಕ ಗಣೇಶ ರಾಠೋಡ ಆಕ್ರೋಶ ವ್ಯಕ್ತಪಡಿಸಿದರು.

ಖಾಸಗಿ ಶಾಲೆಗಳಲ್ಲಿ ಪುಸ್ತಕ, ನೋಟ್‌ಬುಕ್, ಬ್ಯಾಗ್, ಬೂಟು ಮತ್ತು ಸಮವಸ್ತ್ರಗಳನ್ನು ಶಾಲೆಯಲ್ಲೇ ಖರೀದಿಸಬೇಕು ಎಂದು ಪೋಷಕರ ಮೇಲೆ ಒತ್ತಡ ಹೇರಲಾಗುತ್ತಿದೆ. ಇದಕ್ಕಾಗಿ ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವ ಸಂಸ್ಥೆಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ತಾಲೂಕುವಾರು ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಅಲ್ಲದೇ ಡೊನೇಷನ್ ಹಾವಳಿ ತಡೆಯಲು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ತಕ್ಷಣವೇ ಪ್ರಾಧಿಕಾರ ರಚಿಸಬೇಕು. 15 ದಿನಗಳ ಒಳಗಾಗಿ ಶಿಕ್ಷಣ ಇಲಾಖೆ, ಸಂಸ್ಥೆಯ ಮುಖ್ಯಸ್ಥರು, ಪೋಷಕರು ಮತ್ತು ವಿದ್ಯಾರ್ಥಿ ಸಂಘಟನೆಗಳ ಪ್ರತಿನಿಧಿಗಳ ಜಂಟಿ ಸಭೆ ಕರೆಯಬೇಕು. ಸರ್ಕಾರವೇ ಶಾಲಾ ಪ್ರವೇಶ ಶುಲ್ಕವನ್ನು ನಿಗದಿಪಡಿಸಿ ಮಾಧ್ಯಮಗಳ ಮೂಲಕ ಬಹಿರಂಗಪಡಿಸಬೇಕು. ಪ್ರತಿ ತಿಂಗಳು ಪಾಲಕರ ಸಭೆ ನಡೆಸಿ ವಿದ್ಯಾರ್ಥಿಗಳ ಸಮಸ್ಯೆಗಳ ಬಗ್ಗೆ ಚರ್ಚಿಸುವುದು ಕಡ್ಡಾಯವಾಗಬೇಕು. ಜಿಲ್ಲೆಯಲ್ಲಿರುವ ಅನಧಿಕೃತ ಖಾಸಗಿ ಶಾಲೆಗಳ ಪಟ್ಟಿಯನ್ನು ಬಿಡುಗಡೆ ಮಾಡಿ, ಅಂತಹ ಸಂಸ್ಥೆಗಳನ್ನು ತಕ್ಷಣವೇ ಮುಚ್ಚಬೇಕು ಎಂಬ ಹಕ್ಕೊತ್ತಾಯಗಳನ್ನು ಮನವಿಯಲ್ಲಿ ಉಲ್ಲೇಖಿಸಿದೆ. ಈ ಸಂದರ್ಭ ಜಿಲ್ಲಾ ಸಂಚಾಲನಾ ಸಮಿತಿಯ ಸದಸ್ಯರಾದ ವೀರೇಶ, ಯಲ್ಲಪ್ಪ, ಮಲ್ಲಿಕಾರ್ಜುನ, ಶೇಖಪ್ಪ, ಓಂಕಾರ, ಶಶಿಧರ್, ಅರ್ಜುನ, ಆಕಾಶ ಹಾಗೂ ಆದರ್ಶ ಇದ್ದರು.

ನೀರು ಪೋಲಾಗದಂತೆ ನೋಡಿಕೊಳ್ಳಿ: ಅಶೋಕ

ನೀರು ಸಂರಕ್ಷಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ



ನೀರು ಸಂರಕ್ಷಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ನಡೆಯಿತು.

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಪರಿಸರ ಬದಲಾವಣೆಯಿಂದಾಗಿ ವರ್ಷದಿಂದ ವರ್ಷಕ್ಕೆ ಮಳೆಯ ಪ್ರಮಾಣ ಕಡಿಮೆಯಾಗುತ್ತಿರುವುದನ್ನು ನಾವು ಕಾಣುತ್ತಿದ್ದು, ಇದರಿಂದ ನೀರಿನ ಸಮಸ್ಯೆಯು ಎದುರಾಗುತ್ತಿದೆ. ಅದಕ್ಕಾಗಿ ನೀರನ್ನು ಹಿತಮಿತವಾಗಿ ಬಳಕೆ ಮಾಡಬೇಕು. ಅದರ ಜೊತೆಯಲ್ಲಿ ಜಲಮೂಲಗಳ ಸಂರಕ್ಷಣೆ ಮಾಡಲು ಸಾರ್ವಜನಿಕರಿಗೆ ತಿಳುವಳಿಕೆ ನೀಡಲು ಮುಂದಾಗಬೇಕು ಎಂದು ಅಲ್ಟ್ರಾಟೇಕ್ ಸಿಮೆಂಟ್ ಪ್ರೈ ಲಿಮಿಟೆಡನ ಉತ್ತರ ಕರ್ನಾಟಕ ಹಾಗೂ ಗೋವಾ ಭಾಗದ ತಾಂತ್ರಿಕ ಮುಖ್ಯಸ್ಥ ಅಶೋಕ ರೆಡ್ಡಿ ಕೊಲ್ಲೂರ ಹೇಳಿದರು.

ಗುರುವಾರ ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿ.ಡಿ.ಐ.ಟಿ ಎಂಜಿನಿಯರಿಂಗ್ ಕಾಲೇಜಿನ ಸಿವಿಲ್ ವಿಭಾಗದವರು ನೀರು ಸಂರಕ್ಷಣೆ ಕುರಿತು ಆಯೋಜಿಸಿದ ಅರಿವು ಮೂಡಿಸುವ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ನೀರು ಸಂರಕ್ಷಣೆಗಾಗಿ ಮಾಡಿರುವ ನೂತನ ಅವಿಷ್ಕಾರ ಹಾಗೂ ತಂತ್ರಜ್ಞಾನಗಳ ಬಗ್ಗೆ ತಿಳಿಸಿದ ಅವರು, ಕೊಳಚೆನೀರಿನಮರುಶುದ್ಧೀಕರಣ ಬಗ್ಗೆ ಮಾತನಾಡಿ, ಭೂಮಿಯಲ್ಲಿ ಅಂತರ್ಜಲ ಹೆಚ್ಚಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಮಾತನಾಡಿ, ಮಾನವನ ದುರಾಸೆಗೆಇಂದುಪರಿಸರನಾಶವಾಗುತ್ತಿದೆ, ಇದರ ಪರಿಣಾಮ ಮಳೆಯ ಪ್ರಮಾಣ ಕುಂಠಿತಗೊಂಡು ಬೆಳೆಯಿಲ್ಲದೇ ಜನ-ಜಾನುವಾರುಗಳು, ಆಹಾರ ಮತ್ತು ನೀರಿಗೆ ಹಾಹಾಕಾರದ ಪರಿಸ್ಥಿತಿ ನಿರ್ಮಾಣವಾಗಿರುವುದನ್ನು ಕಾಣುತ್ತೇವೆ. ಅದಕ್ಕಾಗಿ ಹನಿ ಹನಿ ನೀರನ್ನು ಕಾಪಾಡಿ ಸದ್ಬಳಕೆ ಮಾಡಿಕೊಳ್ಳುವುದು ಪ್ರತಿಯೊಬ್ಬ ಮಾನವನ ಆದ್ಯ ಕರ್ತವ್ಯವಾಗಿದೆ ಎಂದರು.

> **ಭೂಮಿಯ ಮೇಲೆ ಲಭ್ಯವಿರುವ ನೀರಿನ ಪ್ರಮಾಣದಲ್ಲಿ ಶೇ.3ರಷ್ಟು ಮಾತ್ರ ಮಾತ್ರ ಕುಡಿಯುವುದಕ್ಕೆ ಯೋಗ್ಯವಾಗಿದೆ. ಪ್ರತಿ ಜೀವಿಗೂ ಕುಡಿಯುಲು ನೀರು ಬೇಕು, ಹೀಗಾಗಿ ಜಲಮೂಲಗಳ ಸಂರಕ್ಷಣೆ ಮಾಡುವುದು ಹಾಗೂ ನೀರು ಪೋಲು ಆಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ.**
>
> • **ಅಶೋಕ ರೆಡ್ಡಿ ಕೊಲ್ಲೂರ**
> ಅಲ್ಟ್ರಾಟೇಕ್ ಸಿಮೆಂಟ್ ಪ್ರೈ ಲಿಮಿಟೆಡನ ಉತ್ತರ ಕರ್ನಾಟಕ ಹಾಗೂ ಗೋವಾ ಭಾಗದ ತಾಂತ್ರಿಕ ಮುಖ್ಯಸ್ಥ

ಈಗಲೇ ನಾವು ನೀರಿಗಾಗಿ ಎಚ್ಚೆತ್ತುಕೊಳ್ಳದಿದ್ದರೇ ಮುಂದಿನ ದಿನಗಳಲ್ಲಿ ನೀರಿಗಾಗಿ ಯುದ್ಧ ಮಾಡುವಂತಹ ಪ್ರಸಂಗಗಳ ಬರಬಹುದೆಂದು ಎಚ್ಚರಿಸಿದರು. ಕಾಲೇಜಿನಲ್ಲಿ ಅಂತರ್ಜಲ ಸಮೃದ್ಧಿಕರಣಕ್ಕಾಗಿ ಮಳೆ ಕೊಯ್ಲು ವಿಧಾನವನ್ನು ಅಳವಡಿಸಿಕೊಳ್ಳಲಾಗಿದ್ದು, ನೀರಿನ ಸದ್ಬಳಕೆಯ ಬಗ್ಗೆ ನಾವು ಜಾಗೃತಿ ವಹಿಸಿದ್ದೇವೆ ಎಂದರು.

ಅಲ್ಟ್ರಾಟೇಕ್ ಸಿಮೆಂಟಿನ ಗಿರೀಶ್ ಪವಾರ್‌ಹಾಗೂ ಪ್ರಸನ್ನ ಉಪ್ಪೀನ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾಂಕ್ರೀಟ್ ಟೆಕ್ನಾಲಜಿ ವಿಷಯದಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿ ಅಭಿಷೇಕ್ ಯಂತೂರ ಅವರನ್ನು ಅಲ್ಟ್ರಾಟೇಕ್ ವತಿಯಿಂದ ಗೌರವಿಸಲಾಯಿತು.

ಸಿವಿಲ್ ವಿಭಾಗ ಮುಖ್ಯಸ್ಥ ಪ್ರೊ. ಹರ್ಷ ಜಾಧವ, ಡಾ. ಸ್ನೇಹಾ ಕುಲಕರ್ಣಿ ಮತ್ತು ಪ್ರೊ. ಸೀಮಾ ಬಸರಿಕಟ್ಟಿ ಕಾರ್ಯಕ್ರಮ ಸಂಯೋಜಿಸಿದ್ದರು. ಕಾಲೇಜಿನ 180ಕ್ಕೂ ಹೆಚ್ಚು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು.

ಶ್ರೀನಿವಾಸ ಕಲ್ಯಾಣ ತಾಳಮದ್ದಲೆ



ಶ್ರೀನಿವಾಸ ಕಲ್ಯಾಣ ತಾಳಮದ್ದಲೆ ಕಲಾಸಕ್ತರ ಮೆಚ್ಚುಗೆಗೆ ಪಾತ್ರವಾಯಿತು.

• **ಕನ್ನಡಪ್ರಭ ವಾರ್ತೆ** ಯಲ್ಲಾಪುರ

ತಾಲೂಕಿನ ನಂದೊಳ್ಳಿ ಸಮೀಪದ ಕೊಲ್ಲಕ್ಕಿಪಾಲಿನಲ್ಲಿ ಸಿರಿ ಕಲಾ ಬಳಗದ ಕಲಾವಿದರಿಂದ ಪ್ರಸ್ತುತಗೊಂಡ ಶ್ರೀನಿವಾಸ ಕಲ್ಯಾಣ ತಾಳಮದ್ದಲೆ ಕಲಾಸಕ್ತರ ಮೆಚ್ಚುಗೆಗೆ ಪಾತ್ರವಾಯಿತು. ಹಿಮ್ಮೇಳದಲ್ಲಿ ಭಾಗವತರಾಗಿ ಮಹಾಬಲೇಶ್ವರ ಭಟ್ಟ ಬೆಳಶೇರು, ಮದ್ದಲೆವಾದಕರಾಗಿ ನಾಗಪ್ಪ ಕೋಮಾರ, ಚಂಡೆವಾದಕರಾಗಿ ಸಂಜಯ ಕೋಮಾರ ಭಾಗವಹಿಸಿದ್ದರು. ಶ್ರೀನಿವಾಸನಾಗಿ ನರಸಿಂಹ ಭಟ್ಟ ಕುಂಕಿಮನೆ, ಪದ್ಮಾವತಿಯಾಗಿ ಶಿವರಾಮ ಭಾಗ್ವತ ಮಣ್ಕುಳಿ, ಭೃಗುವಾಗಿ ರವೀಂದ್ರ ಭಟ್ಟ ವೈದಿಕರಮನೆ, ಲಕ್ಷ್ಮೀ ಹಾಗೂ ಬಕುಳೆಯಾಗಿ ಶ್ರೀಧರ ಅಣಲಗಾರ, ವಿಷ್ಣು ಹಾಗೂ ಆಕಾಶರಾಜನಾಗಿ ಮಂಜುನಾಥ ಹೆಬ್ಬಾರ ನೆಡತೋಟ ಪಾತ್ರ ನಿರ್ವಹಿಸಿದರು.

ಜೂಜಾಟ ನಡೆಸುತ್ತಿದ್ದ ವ್ಯಕ್ತಿ ಪೊಲೀಸರ ಬಲೆಗೆ

• **ಕನ್ನಡಪ್ರಭ ವಾರ್ತೆ** ಕಾರವಾರ

ನಗರದ ಹಬ್ಬುವಾಡದ ಹರಿದೇವನಗರದಲ್ಲಿ ಸಾರ್ವಜನಿಕ ರಸ್ತೆ ಮೇಲೆ ಜೂಜಾಟ ನಡೆಸುತ್ತಿದ್ದ ವ್ಯಕ್ತಿಯನ್ನು ಕಾರವಾರ ಶಹರ ಠಾಣೆಯ ಪೊಲೀಸರು ದಾಳಿ ನಡೆಸಿ ಬಂಧಿಸಿದ್ದಾರೆ. ಹಬ್ಬುವಾಡದ ಹರಿದೇವನಗರ ನಿವಾಸಿ, ವೃತ್ತಿಯಲ್ಲಿ ಅಂಗಡಿ ವ್ಯಾಪಾರಿಯಾಗಿರುವ ಪ್ರೇಮಬಾಬು ಬಾಲ ಕೋಟಯ್ಯ ಬುದಾಲ್ (29) ಬಂಧಿತ.

ಈತ ಕಳೆದ ಮಂಗಳವಾರ ಮಧ್ಯಾಹ್ನ 1.05ರ ಸುಮಾರಿಗೆ ಹರಿದೇವನಗರದ ಸಾರ್ವಜನಿಕ ರಸ್ತೆಯ ಮೇಲೆ ನಿಂತು ಮಟ್ಕಾ ದಂಧೆ ನಡೆಸುತ್ತಿದ್ದನು. ₹1ಕ್ಕೆ ₹80 ಕೊಡುತ್ತೇನೆ ಎಂಬ ಆಸೆ ತೋರಿಸಿ ಸಾರ್ವಜನಿಕರಿಂದ ಹಣ ಪಡೆದು ಅಂಕಿ-ಸಂಖ್ಯೆಗಳ ಮೇಲೆ ಪಂಥ ಕಟ್ಟಿಸುತ್ತಿದ್ದ ಎನ್ನಲಾಗಿದೆ.

ಖಚಿತ ಮಾಹಿತಿಯ ಮೇರೆಗೆ ಕಾರವಾರ ಶಹರ ಪೊಲೀಸ್ ಉಪನಿರೀಕ್ಷಕ ಉದ್ದಪ್ಪ ಎ. ಧರೆಪ್ಪನವರ ನೇತೃತ್ವದ ತಂಡವು ಸ್ಥಳಕ್ಕೆ ದಾಳಿ ನಡೆಸಿತು. ಈ ವೇಳೆ ಜೂಜಾಟದಲ್ಲಿ ತೊಡಗಿದ್ದ ಪ್ರೇಮಬಾಬುನನ್ನು ವಶಕ್ಕೆ ಪಡೆದ ಪೊಲೀಸರು, ಆತನಿಂದ ₹1200 ನಗದು ಹಣ, ಅಂಕಿ-ಸಂಖ್ಯೆ ಬರೆದ ಚೀಟಿಗಳು, ಖಾಲಿ ಕಾಗದ ಹಾಗೂ ಒಂದು ಬಾಲ್ ಪೆನ್ ಅನ್ನು ಜಪ್ತಿ ಮಾಡಿ, ಪ್ರಕರಣ ದಾಖಲಿಸಿದ್ದಾರೆ.

12ರಿಂದ ಪುನರ್‌ಪ್ರತಿಷ್ಠಾಪನಾ ಅಷ್ಟಬಂಧ ಮಹೋತ್ಸವ

• **ಕನ್ನಡಪ್ರಭ ವಾರ್ತೆ** ಗೋಕರ್ಣ

ಐನಾಡು ಗ್ರಾಮ ಅಡಿಗೋಣದ ಶ್ರೀ ಗೋಳಿಬೀರದೇವ ಹಾಗೂ ಪರಿವಾರ ದೇವರ ದೇವಸ್ಥಾನದ ನೂತನ ಶಿಖರ ಕಲಶ ಸ್ಥಾಪನೆ, ಪುನರ್‌ಪ್ರತಿಷ್ಠಾಪನಾ ಅಷ್ಟಬಂಧ ಮಹೋತ್ಸವ ಮೇ 12ರಿಂದ ಮೇ 15ರ ವರೆಗೆ ನಡೆಯಲಿದೆ.


ಮೊದಲನೆ ದಿನ ಪುಣ್ಯಾಹ ಹವನ, ಕಂಕಣಬಂಧ ಮತ್ತಿತರ ದೈವಿಕ ಕಾರ್ಯಕ್ರಮ ನಡೆಯಲಿದ್ದು, ಮೇ 13ರಂದು ಪೀಠಶುದ್ಧಿ, ಹವನ ಕಲಶದ ಮನೆಯಲ್ಲಿ ಮತ್ತು ಬೆಳಸೆರೆ ಅಮ್ಮನವರ ಸಾನ್ನಿಧ್ಯದಲ್ಲಿ ಶುದ್ಧಿ ಹವನ, ಮಧ್ಯಾಹ್ನ ಮೂರು ಗಂಟೆಗೆ ಬಂಕಿಕೊಡ್ಲ ಬಂಕನಾಥೇಶ್ವರ ದೇವಾಸ್ಥಾನದಿಂದ ಗೋಳಿ ದೇವಸ್ಥಾನಕ್ಕೆ ನೂತನ ಅಮ್ಮನವರ ವಿಗ್ರಹ ಮೆರವಣಿಗೆ ನಡೆಯಲಿದೆ. ಸಾಯಂಕಾಲ ವಿವಿಧ ದೈವಿಕ ಕಾರ್ಯ ಜರುಗಲಿದೆ.

ಮೇ 14ರಂದು ಅಮ್ಮನವರ ವಿಗ್ರಹ ಸ್ಥಾಪನೆ, ಮೇ 15ರಂದು ನವಕಲಾಷಾಭಿಷೇಕ, ಪಂಚಾಮೃತಾಭಿಷೇಕ, ಅಲಂಕಾರ ಸೇವೆ ಮತ್ತಿತರ ಕಾರ್ಯ ನೇರವೇರಿದ ಬಳಿಕ ಸಾಮೂಹಿಕ ಪೂರ್ಣಾಹುತಿ, ಮಹಾಮಂಗ ಳಾರತಿ, ಪ್ರಸಾದ ವಿತರಣೆ ನಡೆಯಲಿದೆ.

ಆನಂತರ ಭಕ್ತರಿಗೆ ಮಹಾ ಅನ್ನಸಂತರ್ಪಣೆ ನಡೆಯಲಿದೆ. ವೈಯ್ಯಕ್ತಿಕವಾಗಿ ಪೂರ್ಣಾಹುತಿಗೆ ಭಾಗವಹಿಸುವ ಭಕ್ತರು ಬೆಳಗ್ಗೆ ಹತ್ತು ಗಂಟೆಯಿಂದ ತುಪ್ಪ, ಕಾಯಿ ವಸ್ತ್ರ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರ ಕೃಪೆ ಪಾತ್ರರಾಗಬೇಕಾಗಿ ಕೋರಲಾಗಿದೆ.

ಸಾಯಂಕಾಲ ಭಕ್ತವೃಂದದ ಸಹಯೋಗದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ತೆರಿಗೆ ಕ್ಷೇತ್ರದಲ್ಲಿ ವೃತ್ತಿ ಅವಕಾಶ, ಬೆಳವಣಿಗೆಯ ಕಾರ್ಯಾಗಾರ



• **ಕನ್ನಡಪ್ರಭ ವಾರ್ತೆ** ಯಲ್ಲಾಪುರ

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ. ಆರ್.ಡಿ. ಜನಾರ್ದನ ಅಧ್ಯಕ್ಷತೆಯಲ್ಲಿ ವಾಣಿಜ್ಯಶಾಸ್ತ್ರ ವಿಭಾಗದಿಂದ ತೆರಿಗೆ ಕ್ಷೇತ್ರದಲ್ಲಿ ವೃತ್ತಿ: ಅವಕಾಶಗಳು ಮತ್ತು ಬೆಳವಣಿಗೆ ಕುರಿತು ಕಾರ್ಯಾಗಾರ ನಡೆಯಿತು.

ತೆರಿಗೆ ಸಲಹೆಗಾರ ಎಸ್.ಎಂ. ಭಟ್ಟ ತೆರಿಗೆ ಕ್ಷೇತ್ರದಲ್ಲಿ ಇರುವ ವಿವಿಧ ಉದ್ಯೋಗಾವಕಾಶಗಳು, ಆದಾಯ ತೆರಿಗೆ, ಜಿಎಸ್‌ಟಿ, ಮತ್ತು ತೆರಿಗೆ ಯೋಜನೆ ಕುರಿತು ಮಾಹಿತಿ ನೀಡಿದರು. ಕಾಲೇಜಿನ ಐಕ್ಯೂಎಸಿ ಸಂಚಾಲಕ ಡಾ. ಓಂಪ್ರಕಾಶ್ ನಾಯಕ್ ಹಾಗೂ ವಾಣಿಜ್ಯ ಶಾಸ್ತ್ರದ ಎಲ್ಲಾ ಉಪನ್ಯಾಸಕರು ಉಪಸ್ಥಿತರಿದ್ದರು. ವಾಣಿಜ್ಯ ವಿಭಾಗದ ಮುಖ್ಯಸ್ಥೆ ಡಾ. ಲತಾ ಪೂಜಾರಿ ಸ್ವಾಗತಿಸಿದರು. ವಿದ್ಯಾರ್ಥಿನಿಯರಾದ ನಶೀಮಾ ನಿರೂಪಿಸಿದರು. ಆಯಿಷಾ ವಂದಿಸಿದರು.

ಶ್ರೀನಿಧಿ ಸೇವಾವಾಹಿನಿಯ ಬೆಳ್ಳಿ ಹಬ್ಬ 24ಕ್ಕೆ

ಹೊನ್ನಾವರ: ತಾಲೂಕಿನ ಗಾಣಿಗ ಸಮಾಜದ ಶ್ರೀನಿಧಿ ಸೇವಾವಾಹಿನಿಯ ಬೆಳ್ಳಿ ಹಬ್ಬ ಸಮಾರಂಭ ಮೇ 24ರಂದು ಜರುಗಲಿದ್ದು, ಅದೇ ದಿನ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನೋಟಬುಕ್ ವಿತರಣೆ ಕಾರ್ಯಕ್ರಮ ಜರುಗಲಿದೆ. ಬಾಳೆಗದ್ದೆಯ ವೆಂಕ್ರಟಮಣ ಸಭಾಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.80 ಅಧಿಕ ಅಂಕ ಪಡೆದ ಗಾಣಿಗ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ. ಅರ್ಹ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿಯನ್ನು ಕೇಶವ ಶೆಟ್ಟಿ 9483760131 ಹಾಗೂ ಕಾರ್ಯದರ್ಶಿ ರವಿ ಶೆಟ್ಟಿ 6361590678 ಯಾವುದಾದರೂ ನಂಬರ್‌ವಾಟ್ಸ್‌ಆ್ಯಪ್ ಮೂಲಕ ಸಲ್ಲಿಸಿ.

ರೈತರಿಗೆ ನೆರವಾಗಿ... ಕೃಷಿಕ ಸದಸ್ಯರಿಗೆ ನೆರವಾಗುವ ಉದ್ದೇಶದಿಂದ ಈ ನಿರ್ಣಯ: ಟಿಆರ್‌ಸಿ ಅಧ್ಯಕ್ಷ

ಕೃಷಿಯೇತರ ಮಾಧ್ಯಮಿಕ ಸಾಲದ ಕಂತು ಮುಂದೂಡಿಕೆ

• **ಕನ್ನಡ ಪ್ರಭ ವಾರ್ತೆ** ಶಿರಸಿ



ಉತ್ತರಕನ್ನಡ ಜಿಲ್ಲೆಯ ರೈತರು ಟಿಆರ್‌ಸಿ ಮೂಲಕ ಪಡೆದ ಕೃಷಿಯೇತರ ಮಾಧ್ಯಮಿಕ ಸಾಲದ ಕಂತನ್ನು ಒಂದು ವರ್ಷದ ಅವಧಿಗೆ ಮುಂದೂಡಲಾಗಿದೆ ಎಂದು ಟಿಆರ್‌ಸಿ ಅಧ್ಯಕ್ಷ ರಾಮಕೃಷ್ಣ ಶ್ರೀಪಾದ ಹೆಗಡೆ ಕಡವೆ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಮೂಲಕ ಮಾಹಿತಿ ನೀಡಿರುವ ಅವರು, ಅಡಕೆ ಬೆಳೆಗೆ ಬಂದಿರುವ ಎಲೆಚುಕ್ಕಿ ರೋಗ ಹಾಗೂ ತೀವ್ರವಾದ ಇಳುವರಿ ಕುಸಿತದಿಂದ ಸಂಕಷ್ಟಕ್ಕೀಡಾದ ಕೃಷಿಕ ಸದಸ್ಯರಿಗೆ ನೆರವಾಗುವ ಉದ್ದೇಶದಿಂದ ಈ ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

> ## ಮಿಶ್ರ ಬೆಳೆ ಬೆಳೆಯಲು ಸಹಕಾರ
>
> ಉತ್ತಮ ಇಳುವರಿ ಬಂದ ವರ್ಷಗಳಲ್ಲಿ ರೈತರು ಪ್ರಾಮಾಣಿಕವಾಗಿ ಸಾಲ ಮರುಪಾವತಿಸಿ ಸಹಕರಿಸಿರುತ್ತಾರೆ. ಈ ವರ್ಷ ರೈತರ ಆರ್ಥಿಕ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಹಕಾರ ಸಂಘಗಳು ರೈತರಿಗೆ ನೆರವಾಗಬೇಕಿದೆ. ಇದು ಅನಿವಾರ್ಯವೂ ಆಗಿದೆ. ಕೃಷಿಕರಿಗೆ ಎದುರಾದ ಸಂಕಷ್ಟದಿಂದ ಹೊರಬರಲು ಜೇನು ಕೃಷಿ ಕೈಗೊಳ್ಳಲು ಸಂಘದಿಂದ ಪ್ರೋತ್ಸಾಹ ನೀಡಲಾಗುತ್ತಿದೆ. ಅಡಕೆಯೊಂದಿಗೆ ಮಿಶ್ರ ಬೆಳೆ ಬೆಳೆಯಲು ರೈತರು ಹೆಚ್ಚಿನ ಆದ್ಯತೆ ನೀಡಬೇಕು. ಇದಕ್ಕೆ ಪೂರಕ ಸಹಕಾರವನ್ನು ನಮ್ಮ ಸಂಘ ನೀಡಲಿದೆ ಎಂದು ಟಿಆರ್‌ಸಿ ಅಧ್ಯಕ್ಷ ರಾಮಕೃಷ್ಣ ಶ್ರೀಪಾದ ಹೆಗಡೆ ಕಡವೆ ಹೇಳಿದ್ದಾರೆ.

ನಮ್ಮ ಸಂಘವು ಪ್ರಾಮುಖ್ಯವಾಗಿ ಅಡಕೆ ಬೆಳೆಗಾರರಿಗೆ ಕೃಷಿ ಪತ್ತನ್ನು ಒದಗಿಸುವ ಸಹಕಾರಿ ಸಂಘವಾಗಿದೆ. ಅಡಕೆ ಬೆಳೆಯನ್ನೇ ನಂಬಿ ಜೀವನ ನಡೆಸುತ್ತಿರುವ ನಮ್ಮ ಸಂಘದ ಸದಸ್ಯರು ನೈಸರ್ಗಿಕ ಕಾರಣಗಳಿಂದಾಗಿ ಸಂಕಷ್ಟಕ್ಕೆ ತುತ್ತಾಗಿದ್ದಾರೆ.

ಜಿಲ್ಲೆಯಅಡಕೆಬೆಳೆಗಾರರುಅದರಲ್ಲಿಯೂ ಸಿದ್ದಾಪುರ ಹಾಗೂ ಶಿರಸಿ ತಾಲೂಕಿನ ಅಡಕೆ ಕ್ಷೇತ್ರದ ಬಹುಭಾಗ ಮಾರಣಾಂತಿಕ ಎಲೆಚುಕ್ಕೆ ರೋಗಕ್ಕೆ ತುತ್ತಾಗಿದೆ. ಅಡಕೆ ಇಳುವರಿ ಪ್ರಸ್ತುತ ವರ್ಷ ಬಹುತೇಕ ಕಡೆಗಳಲ್ಲಿ ಎಕರೆಗೆ 1ಕ್ವಿಂಟಲ್‌ನಿಂದ 5ಕ್ವಿಂಟಲ್ ಮಾತ್ರ ಎಂದು ಅಂದಾಜಿಸಲಾಗಿದೆ. ತೋಟಗಾರಿಕಾ ಇಲಾಖೆಯ ವರದಿಯಿಂದಲೂ ಸಹ ಎಲೆಚುಕ್ಕೆರೋಗದತೀವ್ರತೆದೃಢಪಟ್ಟಿರುತ್ತದೆ. ಈ ರೀತಿ ಇಳುವರಿ ಕುಸಿತ ಕಳೆದ 20 ವರ್ಷಗಳಲ್ಲಿ ಕಂಡುಬಂದಿಲ್ಲವೆಂಬುದು ಸಾರ್ವಜನಿಕ ವಲಯದಿಂದಲೂ ವ್ಯಕ್ತವಾದ ಅಭಿಪ್ರಾಯವಾಗಿದೆ.

ಅನೇಕ ರೈತರಿಗೆ ಅಡಕೆಗೆ ಬಂದಿರುವ ಎಲೆಚುಕ್ಕೆ ರೋಗ ಹಾಗೂ ಇಳುವರಿ ಕುಸಿತದಿಂದ ಜೀವನ ನಿರ್ವಹಣೆ ಕಷ್ಟಸಾಧ್ಯವಾಗಿದ್ದು, ಸಾಲಮರುಪಾವತಿಸಲು ಸಾಧ್ಯವಾಗದ ಅಸಹಾಯಕತೆಯನ್ನು ವ್ಯಕ್ತಪಡಿಸಿ, ಸಂಘದಿಂದಪಡೆದಕೃಷಿಯೇತರ ಮಾಧ್ಯಮಿಕ ಸಾಲದ ಕಂತುಗಳನ್ನು ಮುಂದೂಡಿಕೊಡುವಂತೆ ಸಂಘವನ್ನು ವಿನಂತಿಸಿಕೊಂಡ ಹಿನ್ನೆಲೆ ಸದಸ್ಯರ ಹಿತದೃಷ್ಟಿಯಿಂದ ಸಾಲದ ಕಂತನ್ನು ಮುಂದೂಡುವ ಕ್ರಮ ಕೈಗೊಳ್ಳಲಾಗಿದೆ ಎಂದು ರಾಮಕೃಷ್ಣ ಹೆಗಡೆ ಕಡವೆ ತಿಳಿಸಿದ್ದಾರೆ.

ಡಾಂಬರು ತೆರವುಗೊಳಿಸಲು ಡಿಸಿಗೆ ಬಿಜೆಪಿ ಮನವಿ

ಸುಸಜ್ಜಿತವಾಗಿದ್ದ ಕಾಂಕ್ರೀಟ್ ರಸ್ತೆಯ ಮೇಲೆ ಅನಗತ್ಯವಾಗಿ ಡಾಂಬರು ಸುರಿದು ವಿರೂಪಗೊಳಿಸಿದ ಅಧಿಕಾರಿಗಳ ಕ್ರಮಕ್ಕೆ ಖಂಡನೆ



ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಕಾರವಾರ

ನಗರದ ಹಬ್ಬುವಾಡಾದಲ್ಲಿ ಸುಸಜ್ಜಿತವಾಗಿದ್ದ ಕಾಂಕ್ರಿಟ್ ರಸ್ತೆಯ ಮೇಲೆ ಅನಗತ್ಯವಾಗಿ ಡಾಂಬರು ಸುರಿದು ರಸ್ತೆಯನ್ನು ವಿರೂಪಗೊಳಿಸಿರುವ ಅಧಿಕಾರಿಗಳ ಕ್ರಮ ಖಂಡಿಸಿರುವ ಬಿಜೆಪಿ ಕಾರವಾರ ಘಟಕದ ಪದಾಧಿಕಾರಿಗಳು, ಕೂಡಲೇ ರಸ್ತೆಯನ್ನು ಸ್ವಚ್ಛಗೊಳಿಸುವಂತೆ ಆಗ್ರಹಿಸಿ ಗುರುವಾರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಮಂಗಳವಾರ ಹಬ್ಬುವಾಡಾದ ಕಾಂಕ್ರಿಟ್ ರಸ್ತೆಗೆ ಕೆಶಿಫ್ ವತಿಯಿಂದ ಮರು ಡಾಂಬರೀಕರಣ ಮಾಡುವ ಕೆಲಸ ನಡೆದಿತ್ತು. ಆದರೆ, ಈಗಾಗಲೇ ಉತ್ತಮ ಸ್ಥಿತಿಯಲ್ಲಿದ್ದ ರಸ್ತೆಯನ್ನು ಹಾಳು ಮಾಡಲಾಗುತ್ತಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದರು. ಇದೀಗ ಡಾಂಬರು ಹಾಕಿದ ಬಳಿಕ ಅದನ್ನು ಸರಿಯಾಗಿ ತೆರವುಗೊಳಿಸದ ಕಾರಣ, ರಸ್ತೆಯ ಮೇಲೆ ಸಣ್ಣ-ಸಣ್ಣ ಜಲ್ಲಿ ಕಲ್ಲುಗಳು ಹರಡಿಕೊಂಡಿವೆ. ಇದರಿಂದ ದ್ವಿಚಕ್ರ ವಾಹನ ಸವಾರರು ಸಂಚರಿಸುವಾಗ ವಾಹನಗಳು ಸ್ಕಿಡ್ ಆಗಿ ಅಪಘಾತಕ್ಕೀಡಾಗುವ ಭೀತಿ ಎದುರಾಗಿದೆ ಎಂದು ಬಿಜೆಪಿ ಮುಖಂಡರು ದೂರಿದ್ದಾರೆ.

ಅಧಿಕಾರಿಗಳ ಅವೈಜ್ಞಾನಿಕ ಕಾಮಗಾರಿಯಿಂದ ರಸ್ತೆ ಈಗ ಅಪಾಯಕಾರಿಯಾಗಿ ಪರಿಣಮಿಸಿದೆ. ರಸ್ತೆಯಲ್ಲಿ ಬಿದ್ದಿರುವ ಜಲ್ಲಿಕಲ್ಲುಗಳಿಂದ ಸವಾರರು ಬಿದ್ದು ಅನಾಹುತ ಸಂಭವಿಸಿದರೆ ಅದರ ಜವಾಬ್ದಾರಿಯನ್ನು ಯಾರು ಹೊರುತ್ತಾರೆ? ಎಂದು ಬಿಜೆಪಿ ಮುಖಂಡರು ಪ್ರಶ್ನಿಸಿದ್ದಾರೆ. ಜಿಲ್ಲಾಧಿಕಾರಿ ತಕ್ಷಣವೇ ಮಧ್ಯಪ್ರವೇಶಿಸಿ, ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಹಾಗೂ ರಸ್ತೆಯನ್ನು ತಕ್ಷಣವೇ ಸ್ವಚ್ಛಗೊಳಿಸಿ ಸುಗಮಸಂಚಾರಕ್ಕೆಅನುವುಮಾಡಿಕೊಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಸಂಜಯ ಸಾಳುಂಕೆ, ನಗರಸಭೆಯ ಮಾಜಿ ಅಧ್ಯಕ್ಷ ರವಿರಾಜ ಅಂಕೋಲೆಕರ, ಬಿಜೆಪಿ ನಗರ ಅಧ್ಯಕ್ಷ ನಾಗೇಶ್ ಕುರ್ಡೇಕರ, ಗ್ರಾಮೀಣ ಮಂಡಲ ಅಧ್ಯಕ್ಷ ಸುಭಾಷ್ ಗುನಗಿ ಸೇರಿದಂತೆ ಪಕ್ಷದ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಕಾಮಗಾರಿ ಮಾಡುತ್ತಿದ್ದವರಿಗೆ ಮಾಜಿ ಶಾಸಕಿ ರೂಪಾಲಿ ತರಾಟೆ



ಮಾಜಿ ಶಾಸಕಿ ರೂಪಾಲಿ ಎಸ್. ನಾಯ್ಕ ಕಾಮಗಾರಿ ವೀಕ್ಷಿಸಿದರು.

• **ಕನ್ನಡಪ್ರಭ ವಾರ್ತೆ** ಕಾರವಾರ

ಕಾರವಾರದ ಹಬ್ಬುವಾಡ ಕಾಂಕ್ರಿಟ್ ರಸ್ತೆಗೆ ಡಾಂಬರು ಹಾಕಿ ಮತ್ತೆ ತೆಗೆಯುತ್ತಿರುವ ಕಾಮಗಾರಿ ವೀಕ್ಷಿಸಿ ಬುಧವಾರ ಕಾಮಗಾರಿ ಮಾಡುತ್ತಿದ್ದವರನ್ನು ಬಿಜೆಪಿ ರಾಜ್ಯ ಉಪಾಧ್ಯಕ್ಷೆ, ಮಾಜಿ ಶಾಸಕಿ ರೂಪಾಲಿ ಎಸ್. ನಾಯ್ಕ ತರಾಟೆಗೆ ತೆಗೆದುಕೊಂಡರು.

ಸದೃಢವಾಗಿರುವ ಕಾಂಕ್ರಿಟ್ ರಸ್ತೆಗೆ ಡಾಂಬರು ಹಾಕಲು ಹೇಳಿದವರು ಯಾರು? ಈಗ ಡಾಂಬರು ತೆಗೆಯಲು ಹೇಳಿದವರು ಯಾರು? ಯಾವ ಪುರುಷಾರ್ಥಕ್ಕಾಗಿ ಕಾಮಗಾರಿ ಮಾಡುತ್ತಿದ್ದೀರಿ. ಗ್ರಾಮೀಣ ಪ್ರದೇಶದ ಎಷ್ಟೋ ರಸ್ತೆಗಳು ಹದಗೆಟ್ಟು ಹೋಗಿದ್ದರೂ ಅಲ್ಲಿ ಕೇಳುವವರೆ ಇಲ್ಲ. ಆದರೆ ಸುಸ್ಥಿತಿಯಲ್ಲಿ ಇರುವ ಕಾಂಕ್ರಿಟ್ ರಸ್ತೆಗೆ ಡಾಂಬರು ಹಾಕುವ ಅವಶ್ಯಕತೆ ಏನಿತ್ತು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜನತೆಯ ಬೇಡಿಕೆ ಹಿನ್ನೆಲೆ ನಾನು ಶಾಸಕಿಯಾಗಿದ್ದಾಗಈ ರಸ್ತೆ ಮಂಜೂರು ಮಾಡಿಸಿದ್ದೆ. ಒಳ್ಳೆಯ ರಸ್ತೆ ನಿರ್ಮಾಣವಾಗಿದೆ. ಅದನ್ನು ಹಾಳುಗೆಡಹುವ ಮನಸ್ಥಿತಿ ಏಕೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಸಾರ್ವಜನಿಕರು ಇದ್ದರು.

ಮಾಜಿ ಸಿಎಂ ಬಿಎಸ್‌ವೈ ಅಭಿಮಾನೋತ್ಸವದ ಕರೆಯೋಲೆ ವಿತರಣೆ

• **ಕನ್ನಡಪ್ರಭ ವಾರ್ತೆ** ಭಟ್ಕಳ

ಚಿತ್ರದುರ್ಗದಲ್ಲಿ ಮೇ 9ರಂದು ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮದ ಕರೆಯೋಲೆಯನ್ನು ಇಲ್ಲಿನ ಬಿಜೆಪಿ ಮಂಡಲದ ವತಿಯಿಂದ ಪಕ್ಷ ಹಿರಿಯ ಕಾರ್ಯಕರ್ತರು, ಪ್ರಮುಖರು ಹಾಗೂ ಯಡಿಯೂರಪ್ಪ ಅವರ ಅಭಿಮಾನಿಗಳಿಗೆ ನೀಡಲಾಯಿತು

ಈ ಸಂದರ್ಭ ಮಂಡಲ ಅಧ್ಯಕ್ಷ ಲಕ್ಷ್ಮೀನಾರಾಯಣ ನಾಯ್ಕ, ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ನಾಯ್ಕ, ಶಿರಾಲಿ ಗ್ರಾಪಂ ಮಾಜಿ ಅಧ್ಯಕ್ಷ ಭಾಸ್ಕರ್‌ದೈಮನೆ ಇದ್ದರು.



ಅಂಗಾರಕ ಸಂಕಷ್ಟಿ ಸಾವಿರಾರು ಭಕ್ತರಿಂದ ದೇವರ ದರ್ಶನ

• **ಕನ್ನಡಪ್ರಭ ವಾರ್ತೆ** ಹೊನ್ನಾವರ

ತಾಲೂಕಿನ ಇಡಗುಂಜಿಯ ಶ್ರೀ ವಿನಾಯಕ ದೇವಸ್ಥಾನದಲ್ಲಿ ಅಂಗಾರಕ ಸಂಕಷ್ಟಿಯ ಪ್ರಯುಕ್ತ ಮಂಗಳವಾರ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮ ನಡೆದವು.

ನಾಡಿನ ವಿವಿಧೆಡೆಯಿಂದ ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿದ ಭಕ್ತರು ದೇವರಿಗೆ ಅಭಿಷೇಕ, ಆರತಿ, ಪಂಚಕಜ್ಜಾಯ, ಹಣ್ಣುಕಾಯಿ ಮುಂತಾದ ಸೇವೆ ಸಲ್ಲಿಸಿದರು.

ಶ್ರೀಕ್ಷೇತ್ರದಲ್ಲಿ ನೂರಾರು ಗಣಹವನ ಹಾಗೂ ಸತ್ಯನಾರಾಯಣ ಪೂಜೆ ನಡೆದವು. ಭಕ್ತರು ಸರತಿ ಸಾಲಿನಲ್ಲಿ ಬಂದು ದೇವರ ದರ್ಶನ ಪಡೆದರು.



ರಾಮನಗರದಲ್ಲಿ ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತು ಜಪ್ತಿ

• **ಕನ್ನಡಪ್ರಭ ವಾರ್ತೆ** ಕಾರವಾರ

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ ಕಾರವಾರ ಕಚೇರಿಯ ಪರಿಸರ ಅಧಿಕಾರಿ ಬಿ.ಕೆ. ಸಂತೋಷ್ ಹಾಗೂ ಗ್ರಾಪಂ, ರಾಮನಗರ, ಜೊಯಿಡಾ ಸಿಬ್ಬಂದಿ ಅರ್ಚನಾ ಮತ್ತು ಕಮಲಾಕರ, ಅವರೊಂದಿಗೆ ಗುರುವಾರ ರಾಮನಗರ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ಪ್ಲೇಟ್, ಸ್ಟ್ರಾ, ಕಪ್ ಮತ್ತು ಕ್ಯಾರಿಬ್ಯಾಗ್ ಇತ್ಯಾದಿಗಳನ್ನೊಳಗೊಂಡ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು ತುಂಬಿದ ಒಮಿನಿ ವಾಹನವನ್ನು ತಡೆದು ಸುಮಾರು 150 ಕೆಜಿಗಳಷ್ಟು ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತು ವಶಪಡಿಸಿಕೊಂಡು ಒಟ್ಟು ₹3,000 ದಂಡ ವಿಧಿಸಲಾಗಿದೆ.

ಅಲ್ಲದೇ ಹೋಲ್‌ಸೇಲ್ ಅಂಗಡಿಗಳಾದ ರಾಮದೇವ ಜನರಲ್ ಸ್ಟೋರ್ಸ್ ಹಾಗೂ ಭಾಗ್ಯಲಕ್ಷ್ಮಿ ಟ್ರೇಡರ್ಸ್ ಇವುಗಳ ಮೇಲೆ ಏಕಕಾಲಕ್ಕೆ ದಾಳಿ ಮಾಡಿ (ಪ್ಲಾಸ್ಟಿಕ್ ಸ್ಟ್ರಾ, ಕಪ್ ಮತ್ತು ಕ್ಯಾರಿಬ್ಯಾಗ್ ಇತ್ಯಾದಿಗಳನ್ನೊಳಗೊಂಡು) ಸುಮಾರು 105 ಕೆಜಿ ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಂಡು ಒಟ್ಟು ₹4,000 ದಂಡವನ್ನು ಅಂಗಡಿ ಮಾಲೀಕರಿಗೆ ವಿಧಿಸಲಾಯಿತು.

